ಲಿಖಿತ ಮೂಲಕ ಉತ್ತರಿಸುವ
ಪ್ರಶ್ನೆಗಳ ಪಟ್ಟಿ

ಒಟ್ಟು ಪ್ರಶ್ನೆಗಳು – ೭೧

**ಪಟ್ಟಿ – ೦೮**

# ಕರ್ನಾಟಕ ವಿಧಾನ ಪರಿಷತ್ತು

**ನೂರ ನಲವತ್ತಮೂರನೆಯ ಅಧಿವೇಶನ**

**(ಮುಂದುವರೆದ ಉಪವೇಶನ)**

**ಶುಕ್ರವಾರ, ದಿನಾಂಕ : ೫ನೇ ಮಾರ್ಚ್, ೨೦೨೧**

---

**ಸಮೂಹ – V**

೧. ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವರು.

೨. ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು.

೩. ಕೃಷಿ ಸಚಿವರು.

೪. ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು.

೫. ಕೈಮಗ್ಗ ಮತ್ತು ಜವಳಿ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಸಚಿವರು.

೬. ಮೂಲಸೌಲಭ್ಯ ಅಭಿವೃದ್ಧಿ ಹಾಗೂ ಹಜ್ ಮತ್ತು ವಕ್ಫ್ ಸಚಿವರು.

೭. ತೋಟಗಾರಿಕೆ ಮತ್ತು ರೇಷ್ಮೆ ಸಚಿವರು.

---

## ರಾಜ್ಯದಲ್ಲಿ ಶುದ್ಧ ನೀರಿನ ಘಟಕಗಳ ಬಗ್ಗೆ

**ಶ್ರೀ ಅರವಿಂದ ಕುಮಾರ್ ಅರಳಿ (ವಿಧಾನ ಸಭೆಯಿಂದ ಚುನಾಯಿತರಾದವರು):–**

೫೯೧ (೭೨೩) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೭–೧೮ ರಿಂದ ೨೦೨೦–೨೧ರವರೆಗೆ ಎಷ್ಟು ಶುದ್ಧ ನೀರಿನ ಘಟಕಗಳನ್ನು ನಿರ್ಮಾಣ ಮಾಡಲಾಗಿದೆ ; (ವರ್ಷವಾರು ಜಿಲ್ಲಾವಾರು ವಿವರ ನೀಡುವುದು)

(ಆ) ಈ ಕುಡಿಯುವ ನೀರಿನ ಘಟಕಗಳ ನಿರ್ಮಾಣ ಕಾರ್ಯವನ್ನು ಯಾವ ಖಾಸಗಿ ಕಂಪನಿಗೆ ವಹಿಸಲಾಗಿದೆ ಮತ್ತು ಈ ಯೋಜನೆಗೆ ಬಿಡುಗಡೆಯಾದ ಅನುದಾನ ಎಷ್ಟು ; (ವರ್ಷವಾರು ಖರ್ಚಾದ ಮತ್ತು ಬಾಕಿ ಉಳಿದಿರುವ ಅನುದಾನದ ವಿವರ ಒದಗಿಸುವುದು)

(ಇ) ಸದರಿ ಶುದ್ಧ ನೀರಿನ ಘಟಕಗಳನ್ನು ಸ್ಥಾಪಿಸುವಲ್ಲಿ ಅವ್ಯವಹಾರ ನಡೆದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮಗಳೇನು ;

(ಈ) ಸ್ಥಾಪಿಸಲಾದ ಘಟಕಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಮತ್ತು ಸ್ಥಗಿತಗೊಂಡಿರುವ ಘಟಕಗಳ ಸಂಖ್ಯೆ ಎಷ್ಟು ?

## ಜವಳಿ ನಿಗಮಗಳ ಕಾರ್ಯನಿರ್ವಹಣೆ ಬಗ್ಗೆ

**ಶ್ರೀ ಅರವಿಂದ ಕುಮಾರ್ ಅರಳಿ (ವಿಧಾನ ಸಭೆಯಿಂದ ಚುನಾಯಿತರಾದವರು):–**

೫೯೨ (೭೨೪) ಮಾನ್ಯ ಕೈಮಗ್ಗ ಮತ್ತು ಜವಳಿ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಜವಳಿ ಇಲಾಖೆಯಡಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ನಿಗಮಗಳ ಸಂಖ್ಯೆ ಎಷ್ಟು ; ಸದರಿ ನಿಗಮಗಳಿಗೆ ರಾಜ್ಯ ಹಾಗೂ ಕೇಂದ್ರ ಸರ್ಕಾರದಿಂದ ಯಾವ ರೀತಿಯ ಅನುದಾನ ನೀಡಲಾಗುತ್ತಿದೆ ; (ಅಂಕಿ ಅಂಶ ಒದಗಿಸುವುದು)

(ಆ) ಕೈಮಗ್ಗ ಹಾಗೂ ವಿದ್ಯುತ್ ಮಗ್ಗದಿಂದ ನೇಯ್ದ ಬಟ್ಟೆಗಳನ್ನು ಯಾವ ರೀತಿಯಲ್ಲಿ ವಿಲೇವಾರಿ ಮಾಡಲಾಗುತ್ತಿದೆ ;

(ಇ) ಉತ್ಪಾದನೆ ಹಾಗೂ ಬೇಡಿಕೆಗಳ ಅಂತರ ಯಾವ ರೀತಿಯಲ್ಲಿದೆ ; ಇದರ ಪರಿಣಾಮವಾಗಿ ರಾಜ್ಯದ ನೇಕಾರರ ಸಮಸ್ಯೆಗೆ ಸರ್ಕಾರ ಯಾವ ರೀತಿಯಲ್ಲಿ ಪರಿಹಾರ ಒದಗಿಸುತ್ತಿದೆ ?

## ರಾಜ್ಯದಲ್ಲಿ ಖಾಲಿ ಹುದ್ದೆಗಳನ್ನು ಭರ್ತಿ ಮಾಡುವ ಬಗ್ಗೆ

**ಶ್ರೀ ಅರವಿಂದ ಕುಮಾರ್ ಅರಳಿ (ವಿಧಾನ ಸಭೆಯಿಂದ ಚುನಾಯಿತರಾದವರು):–**

೫೯೩ (೭೨೨) ಮಾನ್ಯ ತೋಟಗಾರಿಕೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ತೋಟಗಾರಿಕೆ ಇಲಾಖೆಯಲ್ಲಿ ಒಟ್ಟು ಮಂಜೂರಾದ ಹುದ್ದೆಗಳೆಷ್ಟು ; (ವಿವರ ನೀಡುವುದು) ಆ ಪೈಕಿ ಖಾಲಿ ಇರುವ ಹುದ್ದೆಗಳೆಷ್ಟು ; ಈ ಹುದ್ದೆಗಳು ಎಂದಿನಿಂದ ಖಾಲಿ ಇವೆ ; ಈ ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಕೈಗೊಂಡ ಕ್ರಮಗಳೇನು ;

(ಆ) ಬೀದರ್ ಜಿಲ್ಲೆಗೆ ೨೦೨೦–೨೧ನೇ ಸಾಲಿನಲ್ಲಿ ಒಟ್ಟು ಎಷ್ಟು ಅನುದಾನ ಮಂಜೂರಾಗಿರುತ್ತದೆ ; ಯಾವ ಯಾವ ಯೋಜನೆಗಳಿರುತ್ತವೆ ? (ತಾಲ್ಲೂಕುವಾರು ವಿವರ ನೀಡುವುದು)

## ಕೃಷಿ ಇಲಾಖೆಯಿಂದ ಟ್ರಾಕ್ಟರ್, ಟ್ರೇಲರ್ ಹಾಗೂ ಇತರೆ ಸಲಕರಣೆಗಳನ್ನು ಪಡೆಯಲು ಇರುವ ಮಾನದಂಡಗಳ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೫೫೪ (೭೩೪) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೦೩ ವರ್ಷಗಳಲ್ಲಿ ಮಂಡ್ಯ ಜಿಲ್ಲೆಯಲ್ಲಿ ಕೃಷಿ ಇಲಾಖೆಯಿಂದ ಮಂಜೂರು ಮಾಡಿದ ಅನುದಾನವೆಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಮಂಜೂರು ಮಾಡಲಾದ ಅನುದಾನದಲ್ಲಿ ಯಾವ–ಯಾವ ಕಾರ್ಯಕ್ರಮಗಳಿಗೆ ಎಷ್ಟೆಷ್ಟು ಅನುದಾನ ಬಳಕೆ ಮಾಡಲಾಗಿದೆ ; (ತಾಲ್ಲೂಕುವಾರು, ಯೋಜನೆವಾರು ಬಳಕೆ ಮಾಡಿದ ಅನುದಾನದ ವಿವರ ನೀಡುವುದು)

(ಇ) ರೈತರಿಗೆ ಕೃಷಿ ಇಲಾಖೆಯಿಂದ ಟ್ರಾಕ್ಟರ್, ಟ್ರೇಲರ್ ಹಾಗೂ ಇತರೆ ಸಲಕರಣೆಗಳನ್ನು ಪಡೆಯಲು ಇರುವ ಮಾನದಂಡಗಳೇನು ; ಈ ಪರಿಕರಗಳನ್ನು ಪಡೆಯಲು ರೈತರಿಗೆ ಸರ್ಕಾರದಿಂದ ನಿಗದಿಪಡಿಸಲಾದ ಸಬ್ಸಿಡಿ ದರವೆಷ್ಟು ;

(ಈ) ಪ್ರಸ್ತುತ ಸಾಲಿನಲ್ಲಿ ಪರಿಕರಗಳನ್ನು ಪಡೆಯಲು ಅಂದರೆ ಟ್ರಾಕ್ಟರ್, ಟ್ರೇಲರ್‌ಗಳಿಗಾಗಿ ಬಂದಿರುವ ಫಲಾನುಭವಿಗಳ ಸಂಖ್ಯೆಯೆಷ್ಟು; ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಹಾಗೂ ಸಾಮಾನ್ಯ ವರ್ಗದವರಿಗೆ ನಿಗಧಿಪಡಿಸಲಾದ ಗುರಿಯೆಷ್ಟು ;

(ಉ) ಕೇಂದ್ರ ಹಾಗೂ ರಾಜ್ಯ ಸರ್ಕಾರಗಳು ರೈತರ ಅಭಿವೃದ್ಧಿಗಾಗಿ ಹಮ್ಮಿಕೊಂಡಿರುವ ಯೋಜನೆಗಳಾವುವು ; ಈ ಯೋಜನೆಗಳಡಿ ರೈತರಿಗೆ ಸಿಗುವ ಸವಲತ್ತುಗಳಾವುವು ? (ಯೋಜನೆವಾರು ವಿವರ ನೀಡುವುದು)

## ವಿವಿಧ ಯೋಜನೆಯಡಿ ಕುಡಿಯುವ ನೀರು ಸರಬರಾಜಿನ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೫೯೫ (೭೩೧) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಮೂರು ವರ್ಷಗಳಿಂದ ಮಂಡ್ಯ ಜಿಲ್ಲೆಯಲ್ಲಿ ಗ್ರಾಮೀಣ ಕುಡಿಯುವ ನೀರು ಸರಬರಾಜು ಇಲಾಖೆಯಿಂದ ವಿವಿಧ ಯೋಜನೆಯಡಿ ಕುಡಿಯುವ ನೀರು ಸರಬರಾಜಿಗೆ ಸಂಬಂಧಿಸಿದಂತೆ ಕೈಗೊಂಡ ಕಾಮಗಾರಿಗಳಾವುವು ; (ತಾಲ್ಲೂಕುವಾರು ವಿವರ ನೀಡುವುದು)

(ಆ) ನಾಗಮಂಗಲ ವಿಧಾನ ಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಪ್ರಸ್ತುತ ಬೇಸಿಗೆ ಪ್ರಾರಂಭವಾಗುತ್ತಿದ್ದು, ಕುಡಿಯುವ ನೀರಿಗೆ ಸಮಸ್ಯೆ ಉಂಟಾಗುವ ಗ್ರಾಮಗಳ ಪಟ್ಟಿಯನ್ನು ಸಿದ್ಧಪಡಿಸಲಾಗಿದೆಯೇ ; (ಸಂಪೂರ್ಣ ವಿವರ ನೀಡುವುದು) ಮತ್ತು ಇದಕ್ಕೆ ತಗಲುವ ಮೊತ್ತವೆಷ್ಟು ;

(ಇ) ಸದರಿ ಮೊತ್ತವನ್ನು ಪ್ರಸ್ತುತ ಮೀಸಲಿರಿಸಲಾಗಿದೆಯೇ ? (ವಿವರ ನೀಡುವುದು)

## ಸ್ವಚ್ಛ ಗ್ರಾಮ ಯೋಜನೆ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೫೯೬ (೭೩೨) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಂಡ್ಯ ಜಿಲ್ಲೆಯಲ್ಲಿ ಸ್ವಚ್ಛ ಗ್ರಾಮ ಯೋಜನೆಯಡಿ ಎಷ್ಟು ಗ್ರಾಮಗಳನ್ನು ಆಯ್ಕೆ ಮಾಡಲಾಗಿದೆ ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಎಷ್ಟು ಗ್ರಾಮ ಪಂಚಾಯಿತಿಗಳಲ್ಲಿ ಈಗಾಗಲೇ ಹಸಿಕಸ ಮತ್ತು ಒಣಕಸ ಎಂದು ಪ್ರತ್ಯೇಕಿಸಿ ಸಂಗ್ರಹಿಸಲಾಗುತ್ತಿದೆ ; (ತಾಲ್ಲೂಕುವಾರು ವಿವರ ನೀಡುವುದು)

(ಇ) ಒಳಚರಂಡಿ ವ್ಯವಸ್ಥೆಯಿರುವ ಗ್ರಾಮಗಳ ಸಂಖ್ಯೆ ಎಷ್ಟು ; (ಸಂಪೂರ್ಣ ವಿವರ ನೀಡುವುದು)

(ಈ) ಒಳಚರಂಡಿಯಿಲ್ಲದ ಗ್ರಾಮಗಳಲ್ಲಿ ಈ ಯೋಜನೆಯನ್ನು ಅನುಷ್ಠಾನಗೊಳಿಸಲು ಸರ್ಕಾರ ಚಿಂತಿಸಿದೆಯೇ ;

(ಉ) ಹಾಗಿದ್ದಲ್ಲಿ, ಇದುವರೆವಿಗೂ ಈ ಯೋಜನೆಗಳಿಗಾಗಿ ಕಳೆದ ಮೂರು ವರ್ಷಗಳಲ್ಲಿ ಖರ್ಚು ಮಾಡಲಾದ ಅನುದಾನವೆಷ್ಟು ? (ವರ್ಷವಾರು ವಿವರ ನೀಡುವುದು)

## ರೈತ ಸಿರಿ ಯೋಜನೆಯಲ್ಲಿ ಬೆಳೆಗಾರರನ್ನು ಉತ್ತೇಜಿಸುವ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೫೯೭ (೭೩೩) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಂಡ್ಯ ಜಿಲ್ಲೆಯಲ್ಲಿ ರೈತ ಸಿರಿ ಯೋಜನೆಯಡಿಯಲ್ಲಿ ಬೆಳೆಗಾರರನ್ನು ಉತ್ತೇಜಿಸಲು ಕಳೆದ ಮೂರು ವರ್ಷಗಳಿಂದ ಎಷ್ಟು ಅನುದಾನ ಬಿಡುಗಡೆ ಮಾಡಲಾಗಿದೆ ; ಹಾಗೂ ರೈತರಿಗೆ ಎಷ್ಟು ಮೊತ್ತವನ್ನು ಪಾವತಿಸಲಾಗಿದೆ ; (ತಾಲ್ಲೂಕುವಾರು ವಿವರ ನೀಡುವುದು)

(ಆ) ೨೦೨೦-೨೧ನೇ ಸಾಲಿನಲ್ಲಿ ಈ ಕಾರ್ಯಕ್ರಮದಲ್ಲಿ ನಿಗದಿಪಡಿಸಲಾದ ಗುರಿ ಎಷ್ಟು ; ಎಷ್ಟು ಹೆಕ್ಟೇರ್‌ಗಳಲ್ಲಿ ಸಿರಿಧಾನ್ಯವನ್ನು ಬೆಳೆಯಲಾಗಿದೆ ? (ತಾಲ್ಲೂಕುವಾರು ವಿವರ ನೀಡುವುದು)

## ಕೃಷಿ ವಿಶ್ವವಿದ್ಯಾಲಯಗಳ ಕುರಿತು

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರದಿಂದ ಚುನಾಯಿತರಾದವರು):–**

೫೯೮ (೮೩೦) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಕೃಷಿ ವಿಶ್ವವಿದ್ಯಾಲಯಗಳ ಸಂಖ್ಯೆ ಎಷ್ಟು ;

(ಆ) ಅಲ್ಲಿ ಕಾರ್ಯ ನಿರ್ವಹಿಸುವ ಭೋಧಕರ ಹಾಗೂ ಭೋಧಕೇತರರ ಸಂಖ್ಯೆ ಎಷ್ಟು ಮತ್ತು ಯಾವುವು ಭಾಷಾವಾರು ಸಂಪೂರ್ಣ ವಿವರ ನೀಡುವುದು ; (ಪ್ರತಿಯೊಂದು ಕೃಷಿ ವಿಶ್ವವಿದ್ಯಾಲಯವಾರು ಮಾಹಿತಿ ಒದಗಿಸುವುದು)

(ಇ) ಸದರಿ ವಿಶ್ವವಿದ್ಯಾಲಯಗಳಲ್ಲಿ ಒಟ್ಟು ಮಂಜೂರಾದ ಹುದ್ದೆಗಳ ಸಂಖ್ಯೆ ಎಷ್ಟು ಮತ್ತು ಯಾವುವು ; ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು ; ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ಕ್ರಮ ವಹಿಸಲಾಗಿದೆಯೇ ; ಹಾಗಿದ್ದಲ್ಲಿ, ಪ್ರಸ್ತಾವನೆ ಯಾವ ಹಂತದಲ್ಲಿದೆ ? (ವಿಶ್ವವಿದ್ಯಾಲಯವಾರು ಸಂಪೂರ್ಣ ವಿವರವನ್ನು ಒದಗಿಸುವುದು)

## ಬಿ.ಎಂ.ಟಿ.ಸಿ ಪ್ರಯಾಣಿಕರಿಗೆ ಸೌಲಭ್ಯಗಳು

**ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೫೯೯ (೭೫೩) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬಿ.ಎಂ.ಟಿ.ಸಿ ಬಸ್ ನಿಲ್ದಾಣಗಳಲ್ಲಿ ಶೆಲ್ಟರ್‌ಗಳನ್ನು ಎಲ್ಲಾ ಕಡೆಗಳಲ್ಲಿ ನಿರ್ಮಾಣ ಮಾಡಲಾಗಿದೆಯೇ ; ನಿರ್ಮಿಸದಿದ್ದರೆ ಯಾವಾಗ ನಿರ್ಮಾಣ ಮಾಡಲಾಗುವುದು ;

(ಆ) ಬಿ.ಎಂ.ಟಿ.ಸಿ ಬಸ್ಸುಗಳಲ್ಲಿ ಪ್ರಥಮ ಚಿಕಿತ್ಸಾ ಕಿಟ್‌ಗಳನ್ನು ಅಳವಡಿಸಲಾಗಿದೆಯೇ ; ಅಳವಡಿಸದಿದ್ದರೆ ಯಾವಾಗ ಅಳವಡಿಸಲಾಗುವುದು ;

(ಇ) ಬಿ.ಎಂ.ಟಿ.ಸಿ ಬಸ್ಸುಗಳಲ್ಲಿ ಪ್ರಯಾಣಿಸುವ ಪ್ರಯಾಣಿಕರಲ್ಲಿ ಕೊರೋನ ವೈರಸ್ ಹರಡದಂತೆ ಯಾವ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳಲಾಗಿದೆ ? (ವಿವರಗಳನ್ನು ನೀಡುವುದು)

## ಅಂಗವಿಕಲರ ಕಲ್ಯಾಣ ಕಾರ್ಯಕ್ರಮಗಳು

**ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೬೦೦ (೭೫೧) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಅಂಗವಿಕಲರ ಕಲ್ಯಾಣಕ್ಕಾಗಿ ಸರ್ಕಾರದಲ್ಲಿ ಯಾವ ಯಾವ ಕಾರ್ಯಕ್ರಮಗಳನ್ನು ಹಾಕಿಕೊಳ್ಳಲಾಗಿದೆ ; (ಸಂಪೂರ್ಣ ವಿವರಗಳನ್ನು ನೀಡುವುದು)

(ಆ) ಅಂಗವಿಕಲರ ಹಕ್ಕುಗಳ ಕಾಯ್ದೆ ೨೦೧೬ರಲ್ಲಿ ಅಂಗವಿಕಲರಿಗೆ ಯಾವ ಯಾವ ರಕ್ಷಣೆಗಳನ್ನು ನೀಡಲಾಗುತ್ತಿದೆ ;

(ಇ) ಅಂಗವಿಕಲ ವ್ಯಕ್ತಿಗಳ ಮೇಲೆ ದೌರ್ಜನ್ಯ ನಡೆದರೆ ಅವರಿಗೆ ರಕ್ಷಣೆ ನೀಡಲು ಮತ್ತು ನ್ಯಾಯ ದೊರಕಿಸಿಕೊಡಲು ಅಂಗವಿಕಲರ ಕಲ್ಯಾಣ ಇಲಾಖೆ ಯಾವ ರೀತಿ ಕ್ರಮ ಕೈಗೊಳ್ಳುತ್ತದೆ ; ವಿವಿಧ ಇಲಾಖೆಗಳಿಗೆ ಸಂಪರ್ಕಿಸಿ ಇವರಿಗೆ ನ್ಯಾಯ ಮತ್ತು ರಕ್ಷಣೆ ಒದಗಿಸಲು ಸಂಪರ್ಕಸೇತುವಾಗಿ ಕಾರ್ಯನಿರ್ವಹಿಸುತ್ತದೆಯೇ ?

## ರೇಷ್ಮೆ ಇಲಾಖೆಯು ವಿವಿಧ ಯೋಜನೆಗಳಡಿಯಲ್ಲಿ ನಿರ್ಮಿಸಲಾಗಿರುವ ಕಟ್ಟಡಗಳ ಬಗ್ಗೆ

**ಶ್ರೀ ಅ. ದೇವೇಗೌಡ (ಪದವೀಧರರ ಕ್ಷೇತ್ರ):–**

೬೦೧ (೬೯) ಮಾನ್ಯ ತೋಟಗಾರಿಕೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರೇಷ್ಮೆ ಇಲಾಖೆಯು ವಿವಿಧ ಯೋಜನೆಗಳಡಿಯಲ್ಲಿ ನಿರ್ಮಿಸಲಾಗಿರುವ ಕಟ್ಟಡಗಳ ಸಂಖ್ಯೆ ಎಷ್ಟು ;

(ಆ) ಈ ಕಟ್ಟಡಗಳನ್ನು ಯಾವ ಉದ್ದೇಶಕ್ಕಾಗಿ ಕಟ್ಟಲಾಗಿದೆಯೋ, ಆ ಉದ್ದೇಶಕ್ಕಾಗಿ ಬಳಸಲಾಗುತ್ತಿದೆಯೇ ;

(ಇ) ಈ ಇಲಾಖೆಯಲ್ಲಿ ಖಾಲಿ ಇರುವ ಸರ್ಕಾರಿ ಕಟ್ಟಡಗಳ ಸಂಖ್ಯೆ ಎಷ್ಟು ;

(ಈ) ಇಲಾಖೆಯ ಕಟ್ಟಡಗಳನ್ನು ಬಳಸದಿದ್ದಲ್ಲಿ ಬೇರೆ ಸರ್ಕಾರಿ ಇಲಾಖೆಗಳಿಗೆ ಸದರಿ ಕಟ್ಟಡವನ್ನು ಬಾಡಿಗೆಗೆ ನೀಡುವ ಉದ್ದೇಶವಿದೆಯೇ ?

## ರೇಷ್ಮೆ ಇಲಾಖೆಯಲ್ಲಿರುವ ಖಾಲಿ ಹುದ್ದೆಗಳ ಬಗ್ಗೆ

**ಶ್ರೀ ಅ. ದೇವೇಗೌಡ (ಪದವೀಧರರ ಕ್ಷೇತ್ರ):–**

೬೦೨ (೬೦೮) ಮಾನ್ಯ ತೋಟಗಾರಿಕೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರೇಷ್ಮೆ ಇಲಾಖೆಯಲ್ಲಿ ಮಂಜೂರಾದ ವಿವಿಧ ಹುದ್ದೆಗಳ ಸಂಖ್ಯೆ ಎಷ್ಟು ; (ವಿವರ ನೀಡುವುದು)

(ಆ) ಸದರಿ ಇಲಾಖೆಯಲ್ಲಿ ಹಾಲಿ ಕರ್ತವ್ಯ ನಿರ್ವಹಿಸುತ್ತಿರುವ ವಿವಿಧ ಹುದ್ದೆಗಳ ಸಂಖ್ಯೆ ಎಷ್ಟು ;

(ಇ) ಈ ಇಲಾಖೆಯಲ್ಲಿ ಖಾಲಿ ಇರುವ ವಿವಿಧ ಹುದ್ದೆಗಳ ಸಂಖ್ಯೆ ಎಷ್ಟು ; ಅವುಗಳನ್ನು ಭರ್ತಿ ಮಾಡಲು ಸರ್ಕಾರ ಕೈಗೊಂಡ ಕ್ರಮವೇನು ;

(ಈ) ಇಲಾಖೆಯಲ್ಲಿ ವಿವಿಧ ಹುದ್ದೆಗಳು ಖಾಲಿ ಇರುವಾಗ ರೇಷ್ಮೆ ಬೆಳೆಗಾರರಿಗೆ ಯಾವ ರೀತಿಯಲ್ಲಿ ಯೋಜನೆಗಳು ಸದ್ಬಳಕೆ ಆಗಿರುತ್ತದೆ ?

## ಕೈಮಗ್ಗ ಮತ್ತು ಜವಳಿ ಇಲಾಖೆಯ ಕಾರ್ಯಕ್ರಮಗಳ ಬಗ್ಗೆ

**ಶ್ರೀ ಎಂ.ಎ. ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೬೦೩ (೭೫೪) ಮಾನ್ಯ ಕೈಮಗ್ಗ ಮತ್ತು ಜವಳಿ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೈಮಗ್ಗ ಮತ್ತು ಜವಳಿ ಇಲಾಖೆಯಿಂದ ಅನುಷ್ಠಾನ ಗೊಳಿಸಲಾಗುತ್ತಿರುವ ಯೋಜನೆಗಳಾವುವು ; ಈ ಯೋಜನೆಗಳಡಿ ಹಾಸನ ಜಿಲ್ಲೆಗೆ ಕಳೆದ ೩ ವರ್ಷಗಳಲ್ಲಿ ಒದಗಿಸಿರುವ ಅನುದಾನವೆಷ್ಟು ; ಖರ್ಚಾದ ಅನುದಾನವೆಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಆ) ನೂತನ ಜವಳಿ ನೀತಿಯ ಪ್ರೋತ್ಸಾಹಧನ ಮತ್ತು ಉತ್ತೇಜನದಡಿ ಸಿವಿಂಗ್ ಮಷಿನ್ ಆಪರೇಟರ್ ತರಬೇತಿಯನ್ನು ನೀಡಲು ಹಾಸನ ಜಿಲ್ಲಯಲ್ಲಿ ಕಳೆದ ಮೂರು ವರ್ಷಗಳಲ್ಲಿ ಯಾವ ಯಾವ ಸಂಸ್ಥೆಗಳಿಗೆ ಎಷ್ಟು ಎಷ್ಟು ಅನುದಾನ ಒದಗಿಸಲಾಗಿದೆ ; ಎಷ್ಟು ಜನರಿಗೆ ಪ್ರತಿ ವರ್ಷ ತರಬೇತಿ ನೀಡಲಾಗಿದೆ ; ತರಬೇತಿ ಪಡೆದವರ ವಿವರ ಹಾಗೂ ಪ್ರತಿ ತರಬೇತಿಗೆ ಖರ್ಚು ಮಾಡಿರುವ ಹಣದ ವಿವರವನ್ನು ತಾಲ್ಲೂಕುವಾರು, ವಾರ್ಷಿಕವಾರು, ತರಬೇತಿ ಸಂಸ್ಥೆವಾರು ವಿವರ ನೀಡುವುದು ;

(ಇ) ಕಳೆದ ೩ ವರ್ಷಗಳಲ್ಲಿ ನೇಕಾರರಿಗಾಗಿ ಯಾವುದಾದರು ವಿಶೇಷ ಪ್ಯಾಕೇಜ್‌ಗಳನ್ನು ರೂಪಿಸಲಾಗಿದೆಯೇ ; ರೂಪಿಸಿದ್ದಲ್ಲಿ, ಅವುಗಳ ವಿವರ ನೀಡುವುದು ?

## ಕೆಎಸ್‌ಆರ್‌ಟಿಸಿ ಮತ್ತು ಬಿಎಂಟಿಸಿ ನೌಕರರ ಸಮಸ್ಯೆಗಳ ಬಗ್ಗೆ

**ಶ್ರೀ ಎಂ.ಎ. ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೬೦೪ (೭೫೫) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೆಎಸ್‌ಆರ್‌ಟಿಸಿ ಮತ್ತು ಬಿಎಂಟಿಸಿ ನೌಕರರಿಗೆ ಕ್ಷುಲ್ಲಕ ಕಾರಣಗಳಿಗಾಗಿ ನೊಟೀಸ್ ಜಾರಿ ಮಾಡುವುದು ವೇತನ ತಡೆಹಿಡಿಯುವುದು ಮತ್ತು ಇಲಾಖಾ ವಿಚಾರಣೆಗೆ ಒಳಪಡಿಸುವಂತಹ ಪ್ರಕರಣಗಳು ಹೆಚ್ಚಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ಸಂಬಂಧ ಕೈಗೊಂಡಿರುವ ಕ್ರಮಗಳೇನು ;

(ಆ) ಹಾಸನ ಜಿಲ್ಲೆಯಲ್ಲಿರುವ ಕೆಎಸ್‌ಆರ್‌ಟಿಸಿ ಬಸ್ ಡಿಪೋಗಳ ಸಂಖ್ಯೆ ಎಷ್ಟು ; ಈ ಡಿಪೋಗಳು ಹೊಂದಿರುವ ಬಸ್ಸುಗಳ ಸಂಖ್ಯೆ ಎಷ್ಟು ; ಹಾಸನ ಜಿಲ್ಲೆಯ ಕೆಎಸ್‌ಆರ್‌ಟಿಸಿ ವಿಭಾಗದಲ್ಲಿ ಕಾರ್ಯನಿರ್ವಹಿಸುತ್ತಿರುವ ಅಧಿಕಾರಿ ಮತ್ತು ಸಿಬ್ಬಂದಿಗಳ ಸಂಖ್ಯೆ ಎಷ್ಟು ಮತ್ತು ಅವರ ವಿವರ ನೀಡುವುದು ; ಹಾಸನ ಜಿಲ್ಲೆಯಲ್ಲಿರುವ ಕೆಎಸ್‌ಆರ್‌ಟಿಸಿ ಬಸ್ ನಿಲ್ದಾಣಗಳ ಸಂಖ್ಯೆ ಎಷ್ಟು ಮತ್ತು ಅವುಗಳ ವಿವರ ನೀಡುವುದು ;

(ಇ) ಹಾಸನ ಜಿಲ್ಲೆಯ ಎಲ್ಲಾ ಗ್ರಾಮಗಳಿಗೂ ಕೆಎಸ್‌ಆರ್‌ಟಿಸಿ ಬಸ್‌ಗಳು ಸಂಚರಿಸುತ್ತಿವೆಯೇ ; ಇಲ್ಲದಿದ್ದಲ್ಲಿ, ಎಲ್ಲಾ ಗ್ರಾಮಗಳಿಗೂ ಕೆಎಸ್‌ಆರ್‌ಟಿಸಿ ಬಸ್‌ಗಳು ಸಂಚರಿಸಲು ಯಾವಾಗ ಕ್ರಮ ವಹಿಸಲಾಗುವುದು ? (ಮಾಹಿತಿ ನೀಡುವುದು)

## BRC-CRC ಗಳ ಸೇವೆಯನ್ನು ಮುಂದುವರಿಸುವ ಬಗ್ಗೆ

**ಶ್ರೀ ಕಾಂತರಾಜ್ (ಬಿಎಂಎಲ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೦೫ (೭೧೧) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಷ್ಟ್ರೀಯ ಗ್ರಾಮೀಣ ಕುಡಿಯುವ ನೀರಿನ ಯೋಜನೆ (NRDWP) ಅನ್ನು ಯಾವ ಯೋಜನೆಯಡಿ ವಿಲೀನಗೊಳಿಸಲಾಗಿದೆ ; ಈ ಯೋಜನೆಯ ಹೆಸರೇನು ; (ವಿವರವಾದ ಮಾಹಿತಿ ನೀಡುವುದು)

(ಆ) ಆರ್ಥಿಕ ವರ್ಷ ೨೦೨೦–೨೧ನೇ ಸಾಲಿನಲ್ಲಿ ಸದರಿ ಯೋಜನೆಯಡಿ ಕೇಂದ್ರ ಸರ್ಕಾರದಿಂದ ಮತ್ತು ರಾಜ್ಯ ಸರ್ಕಾರದಿಂದ ಎಷ್ಟು ಹಣ ಬಿಡುಗಡೆ ಮಾಡಲಾಗಿದೆ ; (ವಿವರವಾದ ಮಾಹಿತಿ ನೀಡುವುದು)

(ಇ) ಈ ಯೋಜನೆಯ Support Activity ಘಟಕದಡಿ ಬಿಡುಗಡೆ ಮಾಡಲಾದ ಹಣವೆಷ್ಟು; ಯಾವ ಯಾವ ಬಾಬ್ತುಗಳಿಗೆ ಖರ್ಚು ಮಾಡಲಾಗಿದೆ ; (ವಿವರವಾದ ಮಾಹಿತಿ ನೀಡುವುದು)

(ಈ) BRC/CRC ಸಂಯೋಜಕರುಗಳ ಮನವಿಯ ಮೇರೆಗೆ ಕೇಂದ್ರ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯು ರಾಜ್ಯ ಸರ್ಕಾರಗಳಿಗೆ ಆರ್ಥಿಕ ಮತ್ತು ತಾಂತ್ರಿಕ ನೆರವನ್ನು ಮಾತ್ರ ನೀಡಲಾಗುತ್ತಿದೆಯೇ ; ಸಿಬ್ಬಂದಿ ನೇಮಕವು ರಾಜ್ಯ ಸರ್ಕಾರದ ವಿವೇಚನೆಗೆ ಬಿಟ್ಟಿರುವುದು ನಿಜವೇ ; (ವಿವರವಾದ ಮಾಹಿತಿ ನೀಡುವುದು)

(ಉ) ಸದರಿ ಪ್ರಕರಣಕ್ಕೆ ಸಂಬಂಧಿಸಿದಂತೆ ೭೬೧೦CH ರಂತೆ ಸರ್ಕಾರವು Policy decision ಮಾಡಬೇಕಾಗಿರುವುದು ನಿಜವೇ ;

(ಊ) ಯಾವ ಕಾಲಮಿತಿಯಲ್ಲಿ ಸರ್ಕಾರವು Policy decision ಮಾಡಿ BRC/CRC ಗಳ ಸೇವೆಯನ್ನು ಖಾಯಂ ಆಗಿ ಮುಂದುವರೆಸುವುದು ?

## ದೇವದಾಸಿ ಪದ್ಧತಿ ತಡೆಗಟ್ಟುವ ಬಗ್ಗೆ

**ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೦೬ (೭೬೦) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ಉತ್ತರ ಕರ್ನಾಟಕ ಭಾಗದಲ್ಲಿರುವ ದೇವದಾಸಿ ಪದ್ಧತಿಯ ನಿಯಂತ್ರಣಕ್ಕೆ ಹಲವಾರು ಕಾರ್ಯಕ್ರಮಗಳನ್ನು ರೂಪಿಸಲಾಗಿದ್ದರೂ ಸಹ ಈ ಪದ್ಧತಿ ಸಂಪೂರ್ಣವಾಗಿ ನಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ರಾಜ್ಯದಲ್ಲಿ ಕಳೆದ ಮೂರು ವರ್ಷಗಳ ಅವಧಿಯಲ್ಲಿ ಎಷ್ಟು ಬಾಲಕಿಯರು/ಮಹಿಳೆಯರು ದೇವದಾಸಿ ಪದ್ಧತಿಗೆ ಒಳಗಾಗಿದ್ದಾರೆ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ದೇವದಾಸಿ ಪದ್ಧತಿಯನ್ನು ತಡೆಗಟ್ಟಲು ಸರ್ಕಾರ ಯಾವ ಕ್ರಮಗಳನ್ನು ಕೈಗೊಂಡಿದೆ ;

(ಈ) ದೇವದಾಸಿ ಪದ್ಧತಿ ತಡೆಗಟ್ಟಲು ಸರ್ಕಾರೇತರ ಸಂಸ್ಥೆಗಳು ಶ್ರಮಿಸುತ್ತಿದ್ದು, ಸದರಿ ಪ್ರಯತ್ನಕ್ಕೆ ಸರ್ಕಾರದ ಬೆಂಬಲವೇನು ;

(ಉ) ದೇವದಾಸಿ ಪದ್ಧತಿ ತಡೆಗಟ್ಟಲು ಮತ್ತು ದೇವದಾಸಿಯರ ಪುನರ್ವಸತಿಗಾಗಿ ನೂತನ ಕಾನೂನು ರಚನೆ ಮಾಡುವ ಬಗ್ಗೆ ಸರ್ಕಾರದ ಪ್ರಯತ್ನವೇನು ?

## ಸವಳು ಜಮೀನನ್ನು ಪುನರುಜ್ಜೀವನಗೊಳಿಸುವ ಬಗ್ಗೆ

**ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೦೭ (೭೫೭) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿರುವ ಒಟ್ಟು ನೀರಾವರಿ ಯೋಜನೆಗಳಲ್ಲಿ ಎಷ್ಟು ಎಕರೆ ನೀರಾವರಿ ಕ್ಷೇತ್ರಕ್ಕೆ ಒಳಪಟ್ಟಿದೆ ಅದರಲ್ಲಿ ಎಷ್ಟು ಕ್ಷೇತ್ರ ಸವಳು–ಜವಳು ಕ್ಷೇತ್ರವಾಗಿ ಪರಿವರ್ತನೆ ಹೊಂದಿದೆ ;

(ಆ) ಈ ಸವಳು ಜಮೀನನ್ನು ಪುನರುಜ್ಜೀವನಗೊಳಿಸಲು ಸರ್ಕಾರ ಯೋಚಿಸಿದೆಯೇ ;

(ಇ) ಯೋಚಿಸಿದ್ದಲ್ಲಿ, ಇದರ ರೂಪುರೇಷೆಗಳೇನು ; (ವಿವರ ನೀಡುವುದು)

(ಈ) ಈ ಯೋಜನೆಯನ್ನು ಕೇಂದ್ರ ಸರ್ಕಾರ ಮತ್ತು ರಾಜ್ಯ ಸರ್ಕಾರದ ಜಂಟಿ ಸಹಯೋಗದಲ್ಲಿ ತೆಗೆದುಕೊಳ್ಳುವ ವಿಚಾರ ಸರ್ಕಾರದ ಮುಂದಿದೆಯೇ ;

(ಉ) ಬೆಳಗಾವಿ ಜಿಲ್ಲೆಯಲ್ಲಿ ಒಟ್ಟು ಇರುವ ಸವಳು–ಜವಳು ಪ್ರದೇಶವೆಷ್ಟು? (ತಾಲ್ಲೂಕುವಾರು ಮಾಹಿತಿ ನೀಡುವುದು)

## ಗ್ರಾಮ ಪಂಚಾಯತಿಗಳನ್ನು ಮೇಲ್ದರ್ಜೆಗೇರಿಸುವ ಬಗ್ಗೆ

**ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೦೮ (೭೫೮) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೫ರ ಜನಸಂಖ್ಯೆಯ ಆಧಾರದ ಮೇಲೆ ಗ್ರಾಮ ಪಂಚಾಯತಿಗಳನ್ನು ಮೇಲ್ದರ್ಜೆಗೇರಿಸುವ ಕುರಿತು ಸರ್ಕಾರದ ನಿಲುವೇನು ;

(ಆ) ಗ್ರಾಮ ಪಂಚಾಯತಿಗಳನ್ನು ಮೇಲ್ದರ್ಜೆಗೇರಿಸಲು ಇರುವ ಮಾನದಂಡಗಳೇನು ;

(ಇ) ಬೆಳಗಾವಿ ಜಿಲ್ಲೆಯ ಹಲವಾರು ಗ್ರಾಮ ಪಂಚಾಯತಿಗಳು ನಿಗದಿಗಿಂತ ಹೆಚ್ಚಿನ ಜನಸಂಖ್ಯೆಯನ್ನು ಹೊಂದಿದ್ದು ಅವುಗಳನ್ನು ಯಾವ ಕಾಲಮಿತಿಯೊಳಗೆ ಮೇಲ್ದರ್ಜೆಗೇರಿಸಲಾಗುವುದು ?

## ಚೈಲ್ಡ್ ಲೈನ್ ಸೇವೆ ಜಾರಿ ಕುರಿತು

**ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೦೯ (೭೫೯) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಮಕ್ಕಳ ರಕ್ಷಣೆ ಮತ್ತು ಸುರಕ್ಷತೆಗಾಗಿ ಜಾರಿಗೆ ತರಲಾಗಿರುವ ಯೋಜನೆಗಳ ಪೈಕಿ ಚೈಲ್ಡ್ ಲೈನ್ ಸೇವೆ ಜಾರಿಗೆ ತರುವಲ್ಲಿ ವಿಳಂಬವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ರಾಜ್ಯದ ಎಷ್ಟು ಜಿಲ್ಲೆಗಳಲ್ಲಿ ಚೈಲ್ಡ್ ಲೈನ್ ೧೦೯೮ ಸೇವೆ ಜಾರಿಯಲ್ಲಿದೆ ; (ವಿವರ ನೀಡುವುದು)

(ಇ) ಎಲ್ಲಾ ಜಿಲ್ಲೆಗಳಲ್ಲೂ ಸ್ಥಾಪಿಸಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ;

(ಈ) ಎಷ್ಟು ಜಿಲ್ಲೆಗಳಲ್ಲಿ ಚೈಲ್ಡ್ ಲೈನ್ ೧೦೯೮ ಸಲಹಾ ಸಮಿತಿ ರಚನೆಯಾಗಿದೆ ; ಅದರ ಕಾರ್ಯವಿಧಾನದ ಕುರಿತು ವಿವರ ನೀಡುವುದು ;

(ಉ) ಚೈಲ್ಡ್ ಲೈನ್ ೧೦೯೮ ಮತ್ತು ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಕಾರ್ಯಕ್ಕೂ ಇರುವ ಸಂಬಂಧವೇನು ? (ವಿವರ ನೀಡುವುದು)

## ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ಗ್ರಂಥಾಲಯಗಳ ಬಗ್ಗೆ

**ಡಾ: ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) :–**

೬೧೦ (೭೪೬) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಗಳಲ್ಲಿರುವ ಗ್ರಂಥಾಲಯಗಳ ಸಂಖ್ಯೆ ಎಷ್ಟು ;

(ಆ) ಗ್ರಂಥಾಲಯಗಳಲ್ಲಿ ಕೆಲಸ ನಿರ್ವಹಿಸುತ್ತಿರುವ ಸಿಬ್ಬಂದಿ ಎಷ್ಟು ; (ಜಿಲ್ಲಾವಾರು ವಿವರಗಳನ್ನು ನೀಡುವುದು)

(ಇ) ಮೇಲ್ಕಂಡ ಸಿಬ್ಬಂದಿಗಳಿಗೆ ಸರ್ಕಾರ/ಪಂಚಾಯಿತಿ ನೀಡುತ್ತಿರುವ ಗೌರವಧನ ಎಷ್ಟು ;

(ಈ) ಈ ಸಿಬ್ಬಂದಿ/ನೌಕರರಿಗೆ ಕನಿಷ್ಠ ವೇತನ ನೀಡಲು ಸರ್ಕಾರ ಕ್ರಮ ಕೈಗೊಳ್ಳುವುದೇ ?

## ಅಲ್ಪ ಸಂಖ್ಯಾತರ ಫಲಾನುಭವಿಗಳ ಬಗ್ಗೆ

**ಡಾ: ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) :–**

೬೧೧ (೭೪೭) ಮಾನ್ಯ ಕೈಮಗ್ಗ ಮತ್ತು ಜವಳಿ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಲ್ಲಿ ಕಳೆದ ೦೫ ವರ್ಷಗಳಿಂದ ಬಿಡುಗಡೆ ಮಾಡಿರುವ ಅನುದಾನ ಎಷ್ಟು ; (ಯೋಜನೆವಾರು ವಿವರ ನೀಡುವುದು)

(ಆ) ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಲ್ಲಿ ಗಂಗಾ ಕಲ್ಯಾಣ ಯೋಜನೆ ಅಡಿ ಕಳೆದ ೦೫ ವರ್ಷಗಳಲ್ಲಿ ಬಿಡುಗಡೆ ಮಾಡಲಾದ ಅನುದಾನ ಮತ್ತು ಖರ್ಚು ಮಾಡಲಾದ ಅನುದಾನ ಎಷ್ಟು ; (ವಿವರ ನೀಡುವುದು)

(ಇ) ಮೇಲ್ಕಂಡ ಫಲಾನುಭವಿಗಳ ಆಯ್ಕೆ ಮಾಡಲು ಅನುಸರಿಸುವ ಮಾನದಂಡಗಳೇನು ?

## ಸಾರಿಗೆ ಇಲಾಖೆಯ ನಿಗಮ/ಮಂಡಳಿ ಬಗ್ಗೆ

**ಡಾ: ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) :–**

೬೧೨ (೭೪೮) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಸಾರಿಗೆ ಇಲಾಖೆಯ ಅಡಿಯಲ್ಲಿ ನಡೆಸುತ್ತಿರುವ ವಿವಿಧ ನಿಗಮ/ಮಂಡಳಿಗಳು ಯಾವುವು ; (ವಿವರ ನೀಡುವುದು)

(ಆ) ಈ ನಿಗಮ ಮತ್ತು ಮಂಡಳಿಗಳಲ್ಲಿ ಕಳೆದ ೩ ವರ್ಷಗಳಲ್ಲಿ ಆರ್ಥಿಕ ನಷ್ಟ ಅನುಭವಿಸಿರುವ ನಿಗಮ/ಮಂಡಳಿಗಳು ಯಾವುವು;

(ಇ) ಆರ್ಥಿಕವಾಗಿ ನಷ್ಟದಲ್ಲಿರುವ ನಿಗಮ ಮಂಡಳಿಗಳ ಪುನಶ್ಚೇತನಕ್ಕೆ ಸರ್ಕಾರ ತೆಗದುಕೊಂಡ ಕ್ರಮಗಳೇನು ?

## ರೈತರ ಖಾತೆಗೆ ಹಣ ವರ್ಗಾವಣೆ ಬಗ್ಗೆ

**ಶ್ರೀ ಎಂ. ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೧೩ (೬೩೬) ಮಾನ್ಯ ತೋಟಗಾರಿಕೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಅಕ್ರಮಗಳನ್ನು ತಡೆಗಟ್ಟುವ ಸಲುವಾಗಿ ಹಣ ವರ್ಗಾವಣೆಯನ್ನು ಆನ್‌ಲೈನ್ ಮೂಲಕ ಮಾಡುವ ಕಾನೂನು ಜಾರಿಯಾಗಿದ್ದು,

ಕಳೆದ ತಿಂಗಳಿಂದ ರೈತರ ಖಾತೆಗೆ ಹಣ ಬಂದಿಲ್ಲವೆಂದು ರಾಮನಗರ ರೇಷ್ಮೆ ಇಲಾಖೆಗೆ ರೈತರು ಮುತ್ತಿಗೆ ಹಾಕಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಈ ಪ್ರಕರಣದ ಕುರಿತು ಮಾಹಿತಿ ಪಡೆದುಕೊಳ್ಳಲಾಗಿದೆಯೇ ; ಪಡೆದುಕೊಂಡಿದ್ದಲ್ಲಿ, ಆ ಬಗೆಗಿನ ಮಾಹಿತಿ ನೀಡುವುದು ;

(ಇ) ಒಂದು ವೇಳೆ ಇದಕ್ಕೆ ಅಧಿಕಾರಿಗಳು ಕಾರಣ ಆಗಿದ್ದಲ್ಲಿ, ಅಂತಹ ಅಧಿಕಾರಿಗಳ ವಿರುದ್ಧ ಕ್ರಮ ಕೈಗೊಳ್ಳಲಾಗಿದೆಯೇ ;

(ಈ) ಬಗೆಹರಿಯದಿದ್ದಲ್ಲಿ, ಯಾವಾಗ ಬಗೆ ಹರಿಯುತ್ತದೆ ಹಾಗೂ ಪರಿಹಾರ ನೀಡಲು ವಿಳಂಬವಾಗಿರುವುದಕ್ಕೆ ಕಾರಣಗಳೇನು ? (ಸಂಪೂರ್ಣ ಮಾಹಿತಿ ನೀಡುವುದು)

## ರೈತರಿಗೆ ನೀಡುತ್ತಿರುವ ರಸಗೊಬ್ಬರ ವಿತರಣೆ ಬಗ್ಗೆ

**ಶ್ರೀ ಎಂ. ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೧೪ (೬೩೭) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಸರಿಯಾದ ಸಮಯಕ್ಕೆ ರಸ ಗೊಬ್ಬರ ನೀಡದೆ ತುಮಕೂರಿನಲ್ಲಿ ರೈತರು ಪ್ರತಿಭಟನೆ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಸಮಯಕ್ಕೆ ಸರಿಯಾಗಿ ರಸಗೊಬ್ಬರ ಪೂರೈಕೆ ಮಾಡದ ಅಧಿಕಾರಿಗಳ ವಿರುದ್ಧ ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಇ) ರಸಗೊಬ್ಬರಗಳನ್ನು ಯಾವ ಸಮಯಕ್ಕೆ ಎಷ್ಟು ಪ್ರಮಾಣದಲ್ಲಿ ಕೊಡಬೇಕು ಎಂಬ ಮಾನದಂಡಗಳು ಏನಾದರೂ ಇವೆಯೇ ; ಹಾಗಿದ್ದಲ್ಲಿ, ವಿವರಗಳೊಂದಿಗೆ ಮಾಹಿತಿ ನೀಡುವುದು ?

## ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಲ್ಲಿ ಖಾಲಿಯಿರುವ ಹುದ್ದೆಗಳ ಬಗ್ಗೆ

**ಶ್ರೀ ಎಂ. ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೧೫ (೬೩೮) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಲ್ಲಿ ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು ;

(ಆ) ಖಾಲಿ ಇರುವ ಹುದ್ದೆಗಳ ಭರ್ತಿಗೆ ಅರ್ಜಿ ಆಹ್ವಾನಿಸಲಾಗಿದೆಯೇ; ಆಹ್ವಾನಿಸಿದ್ದಲ್ಲಿ, ಈವರೆಗೆ ಎಷ್ಟು ಅರ್ಜಿಗಳನ್ನು ಸ್ವೀಕರಿಸಲಾಗಿದೆ;

(ಇ) ಆಹ್ವಾನಿಸದಿದ್ದಲ್ಲಿ, ಈ ಪ್ರಕ್ರಿಯೆ ಯಾವಾಗ ಪ್ರಾರಂಭವಾಗುತ್ತದೆ;

(ಈ) ಖಾಲಿಯಿರುವ ಹುದ್ದೆಗಳು ಎಷ್ಟು ; ಅವು ಯಾವುವು ; ವಿವರಣೆ ಸಹಿತ ಮಾಹಿತಿ ನೀಡುವುದು ;

(ಉ) ಹುದ್ದೆಗಳಿಗೆ ಬೇಕಾಗಿರುವ ಶೈಕ್ಷಣಿಕ ಅರ್ಹತೆ ಏನು ? (ಸಂಪೂರ್ಣ ಮಾಹಿತಿ ನೀಡುವುದು)

## ಹಿರಿಯ ನಾಗರೀಕರಿಗೆ ನೀಡುತ್ತಿರುವ ಪಿಂಚಣಿ ಬಗ್ಗೆ

**ಶ್ರೀ ಎಂ. ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೧೬ (೬೪೦) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೨೦–೨೦೨೧ನೇ ಸಾಲಿನಲ್ಲಿ ಹೊಸದಾಗಿ ಹಿರಿಯ ನಾಗರಿಕ ಪಿಂಚಣಿದಾರರ ಸಂಖ್ಯೆ ಎಷ್ಟು ;

(ಆ) ಪಿಂಚಣಿದಾರರಿಗೆ ಸರಿಯಾಗಿ ಪಿಂಚಣಿ ಹಣ ಸಿಗುತ್ತಿಲ್ಲ ಎಂಬ ಆರೋಪವಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಂದಿದ್ದಲ್ಲಿ, ಈ ಕುರಿತು ತನಿಖೆ ನಡೆದಿದೆಯೇ ; ನಡೆದಿದ್ದಲ್ಲಿ, ಇದಕ್ಕೆ ಸೂಕ್ತ ಕಾರಣ ನೀಡುವುದು ;

(ಈ) ಹಿರಿಯ ನಾಗರಿಕರ ಪಿಂಚಣಿದಾರರ ಪಟ್ಟಿ ಪರಿಷ್ಕರಣೆ ಹೊಂದಿದೆಯೇ ; ಹೊಂದಿದ್ದಲ್ಲಿ, ಹೊಸ ಸೇರ್ಪಡೆಗಳ ಸಂಖ್ಯೆ ಎಷ್ಟು ಮತ್ತು ಕಾರಣಾಂತರಗಳಿಂದ ಹೊರಗಿಡಲಾಗಿರುವ ಪಟ್ಟಿಗಳ ಸಂಖ್ಯೆ ಎಷ್ಟು ?

## ಸಾರಿಗೆ ನೌಕರರ ಬೇಡಿಕೆಗಳನ್ನು ಈಡೇರಿಸುವ ಬಗ್ಗೆ

**ಶ್ರೀ ಎಂ. ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೧೭ (೬೩೯) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ಡಿಸೆಂಬರ್‌ನಲ್ಲಿ ಸಾರಿಗೆ ನೌಕರರ ಮುಷ್ಕರದ ಸಮಯದಲ್ಲಿ ಸರ್ಕಾರವು ಅವರ ೧೦ ಬೇಡಿಕೆಗಳಲ್ಲಿ ೦೯ ಬೇಡಿಕೆಗಳನ್ನು ಈಡೇರಿಸುವುದಾಗಿ ಆಶ್ವಾಸನೆ ನೀಡಲಾಗಿದ್ದು, ಈ ಬೇಡಿಕೆಗಳಲ್ಲಿ ಇದುವರೆವಿಗೂ ಎಷ್ಟು ಬೇಡಿಕೆಗಳನ್ನು ಈಡೇರಿಸಲಾಗಿದೆ ;

(ಆ) ಫೆಬ್ರವರಿ ತಿಂಗಳಲ್ಲಿ ಸಾರಿಗೆ ನೌಕರರು ಪ್ರತಿಭಟನೆ ಮಾಡಿರುವುದರ ಬಗ್ಗೆ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಸಾರಿಗೆ ನೌಕರರಿಗೆ ನೀಡಬೇಕಾದ ಬಾಕಿ ವೇತನದ ಮೊತ್ತವೆಷ್ಟು;

(ಈ) ಬಾಕಿ ವೇತನವನ್ನು ಸಂಪೂರ್ಣವಾಗಿ ನೀಡಲಾಗಿದೆಯೇ ? (ಸಂಪೂರ್ಣ ಮಾಹಿತಿ ನೀಡುವುದು)

## ಪಂಚಾಯತ್ ರಾಜ್ ಸಂಸ್ಥೆಗಳ ಅಧೀನದ ವಾಣಿಜ್ಯ ಕಟ್ಟಡಗಳ ಏಲಂ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೧೮ (೭೩೭) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಉಡುಪಿ ಮತ್ತು ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಜಿಲ್ಲಾ ಪಂಚಾಯತಿ, ತಾಲ್ಲೂಕು ಪಂಚಾಯತಿ ಮತ್ತು ಗ್ರಾಮ ಪಂಚಾಯತಿ ಅಧೀನದಲ್ಲಿರುವ ವಾಣಿಜ್ಯ ಕಟ್ಟಡಗಳ ಸಂಖ್ಯೆ ಎಷ್ಟು ; ಅವುಗಳಿಂದ ವಾರ್ಷಿಕವಾಗಿ ಸಂಗ್ರಹವಾಗುವ ಬಾಡಿಗೆಯ ಶುಲ್ಕವೆಷ್ಟು ; (ಜಿಲ್ಲಾವಾರು ಮತ್ತು ತಾಲ್ಲೂಕು ಪಂಚಾಯಿತಿವಾರು ಮಾಹಿತಿಯನ್ನು ನೀಡುವುದು)

(ಆ) ಈ ವಾಣಿಜ್ಯ ಕಟ್ಟಡಗಳ ಏಲಂ ಪ್ರಕ್ರಿಯೆಗೆ ಸರ್ಕಾರದಿಂದ ನಿಯಮಾವಳಿಯನ್ನು ರೂಪಿಸಲಾಗಿದೆಯೇ ; ಇಲ್ಲವಾದಲ್ಲಿ, ಈ ಸ್ಥಳೀಯ ಸಂಸ್ಥೆಗಳಲ್ಲಿ ಯಾವ ನಿಯಮಗಳನ್ನು ಅನುಸರಿಸಿ ಏಲಂ ನಡೆಸಲಾಗುತ್ತಿದೆ ;

(ಇ) ಬಾಡಿಗೆ ಪಡೆದ ವರ್ತಕರು ನ್ಯಾಯಾಲಯದಲ್ಲಿ ದಾವೆಗಳನ್ನು ದಾಖಲಿಸುವ ಪ್ರಕರಣಗಳಲ್ಲಿ ಇದರಿಂದ ಸ್ಥಳೀಯ ಸಂಸ್ಥೆಗಳಿಗೆ ಹಿನ್ನಡೆಯಾಗುತ್ತಿರುವುದು ನಿಜವೇ ; ಇದರಿಂದ ಸ್ಥಳೀಯ ಸಂಸ್ಥೆಗಳು ಆದಾಯದಲ್ಲಿ ನಷ್ಟ ಅನುಭವಿಸುತ್ತಿದ್ದನ್ನು ತಪ್ಪಿಸಲು ಸರ್ಕಾರದ ಕ್ರಮವೇನು ?

## ಜಲಜೀವನ್ ಮಿಷನ್ ಯೋಜನೆಯ ಉದ್ದೇಶ ಹಾಗೂ ಕಾರ್ಯಗಳ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೧೯ (೭೩೭) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಗ್ರಾಮ ಪಂಚಾಯಿತಿಗಳಲ್ಲಿ ಪ್ರಸ್ತುತ ಚಾಲ್ತಿಯಲ್ಲಿರುವ ಕೇಂದ್ರ ಹಾಗೂ ರಾಜ್ಯ ಪುರಸ್ಕೃತ ಯೋಜನೆಗಳು ಯಾವುವು, ಪ್ರಸ್ತುತ ಪ್ರಾರಂಭಗೊಂಡಿರುವ ಜಲಜೀವನ್ ಮಿಷನ್ (ಜೆಜೆಎಮ್) ಯೋಜನೆಯ ಉದ್ದೇಶ ಹಾಗೂ ಕಾರ್ಯಗಳು, ಮಾರ್ಗಸೂಚಿಗಳು ಯಾವುವು ;

(ಆ) ಜಲಜೀವನ್ ಮಿಷನ್ (ಜೆಜೆಎಮ್) ಯೋಜನೆಯನ್ನು ರೂಪಿಸುವ ಪೂರ್ವದಲ್ಲಿ ನೀರಿನ ಮೂಲ ಮತ್ತು ಅವುಗಳ ಇಳುವರಿ ಸಾಮರ್ಥ್ಯದ ಕುರಿತು ತಾಂತ್ರಿಕ ಅಭಿಪ್ರಾಯವನ್ನು ಪಡೆಯಲಾಗಿದೆಯೇ ; ಇಲ್ಲವಾದಲ್ಲಿ, ಯೋಜನೆಯಿಂದ ಸಾರ್ವಜನಿಕ ಹಣದ ದುರುಪಯೋಗವಾದಂತಾಗುವುದನ್ನು ಸರ್ಕಾರ ಗಮನಿಸಿದೆಯೇ ;

(ಇ) ಈ ಯೋಜನೆಯಲ್ಲಿ ಕಾಮಗಾರಿಯ ಅಂದಾಜು ಮೊತ್ತದ ಶೇ. ೧೦ ರಷ್ಟನ್ನು ಕಡ್ಡಾಯವಾಗಿ ಸಾರ್ವಜನಿಕರಿಂದ ವಂತಿಗೆ ಸಂಗ್ರಹಿಸುವ ನಿಬಂಧನೆ ಇರುವುದೇ ; ಒಂದು ವೇಳೆ ಸಾರ್ವಜನಿಕರು ವಂತಿಗೆ ನೀಡಲು ನಿರಾಕರಿಸಿದರೆ ಯೋಜನೆ ಸ್ಥಗಿತಗೊಳ್ಳುವುದೇ ; ಅಂತಹ ಸಂದರ್ಭದಲ್ಲಿ ಬದಲಿ ಅನುದಾನ ವ್ಯವಸ್ಥೆಯನ್ನು ಸರ್ಕಾರ ಮಾಡುವುದೇ ?

## ವಿಕಲ ಚೇತನರ ಕಲ್ಯಾಣದ ಯೋಜನೆ ಮಾರ್ಗಸೂಚಿಯ ಷರತ್ತುಗಳ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೨೦ (೭೪೦) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ವಿಕಲಚೇತನ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯಲ್ಲಿ ಪ್ರಸ್ತುತ ಚಾಲ್ತಿಯಲ್ಲಿರುವ ವಿವಿಧ ಯೋಜನೆಗಳು ಯಾವುವು ; ಅವುಗಳ ಮಾರ್ಗಸೂಚಿಗಳು ಯಾವುವು ; (ಮಾರ್ಗಸೂಚಿಯ ಪ್ರತಿಯನ್ನು ಒದಗಿಸುವುದು)

(ಆ) ಕಠಿಣ ಮಾರ್ಗಸೂಚಿ ಮತ್ತು ಫಲಾನುಭವಿಗಳ ಕೊರತೆಯಿಂದ ವಿವಿಧ ಇಲಾಖೆಗಳಲ್ಲಿ ವಿಕಲಚೇತನರ ಕಲ್ಯಾಣಕ್ಕಾಗಿ ಮೀಸಲಿಟ್ಟ

ಅನುದಾನವು ಖರ್ಚಾಗದೇ ಬಾಕಿ ಉಳಿದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ ಸರ್ಕಾರ ಕೈಗೊಂಡ ಕ್ರಮವೇನು ;

(ಇ) ವಿಕಲಚೇತನರಿಗೆ ಅತೀ ಅಗತ್ಯವಾದ ಯಂತ್ರಚಾಲಿಕ ದ್ವಿಚಕ್ರ, ಯಾಂತ್ರಿಕ ಶ್ರವ್ಯ ಸಾಧನದಂತಹ ಸೌಲಭ್ಯ ಪಡೆಯಲು ಅನುಕೂಲವಾಗುವಂತೆ ವಿಕಲಚೇತನರ ಯೋಜನೆ ಮಾರ್ಗಸೂಚಿಯಲ್ಲಿ ಸಡಿಲತೆಯನ್ನು ತರುವ ಉದ್ದೇಶ ಸರ್ಕಾರದ ಮುಂದಿದೆಯೇ ; ಈ ಬಗ್ಗೆ ಸರ್ಕಾರದ ಕ್ರಮವೇನು ?

## ಕೃಷಿ ಇಲಾಖೆಯ ಯೋಜನೆ & ಕಾರ್ಯಕ್ರಮಗಳ ಬಗ್ಗೆ

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೨೧ (೭೩೯) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಉಡುಪಿ ಮತ್ತು ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಕೃಷಿ ಇಲಾಖಾ ಅಧೀನ ಕಛೇರಿಗಳು ಯಾವುವು ; ಈ ಕಛೇರಿಗಳ ಸಂಪರ್ಕ ವಿಳಾಸ ಮತ್ತು ಅಧಿಕಾರಿಗಳ ದೂರವಾಣಿ ಸಂಖ್ಯೆಗಳು ಯಾವುವು ; ಮಂಜೂರಾತಿಯಾದ ಹುದ್ದೆಗಳು, ಕಾರ್ಯನಿರ್ವಹಿಸುತ್ತಿರುವ ಮತ್ತು ಖಾಲಿಯಿರುವ ಹುದ್ದೆಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮತ್ತು ಕಛೇರಿವಾರು ವಿವರ ಒದಗಿಸುವುದು)

(ಆ) ೨೦೨೦–೨೧ನೇ ಸಾಲಿನಲ್ಲಿ ಅನುಷ್ಠಾನಗೊಳಿಸುತ್ತಿರುವ ಯೋಜನೆಗಳು ಯಾವುವು ; ಅವುಗಳ ಮಾರ್ಗಸೂಚಿಗಳು ಯಾವುವು ; ಈ ಯೋಜನೆಗಳಲ್ಲಿ ರೈತರ ಆಯ್ಕೆಗೆ ಇರುವ ಮಾನದಂಡಗಳೇನು ; ಸರ್ಕಾರದಿಂದ ಈ ಯೋಜನೆಗಳಿಗೆ ಬಿಡುಗಡೆಯಾದ ಅನುದಾನವೆಷ್ಟು ; ಬಿಡುಗಡೆಗೆ ಬಾಕಿಯಿರುವ ಅನುದಾನವೆಷ್ಟು ; (ಯೋಜನೆವಾರು ಮಾಹಿತಿ ಒದಗಿಸುವುದು)

(ಇ) ಸಣ್ಣ ಮತ್ತು ಅತಿ ಸಣ್ಣ ರೈತರಿಗೆ ಕೃಷಿ ಉತ್ತೇಜನ ನೀಡಲು ಸರ್ಕಾರದಿಂದ ಕೈಗೊಂಡ ಕ್ರಮಗಳು ಯಾವುವು ; ಈ ರೈತರು ಹೆಚ್ಚಿನ ಪ್ರಮಾಣದಲ್ಲಿ ಅನುಸರಿಸುವ ಸಾಂಪ್ರದಾಯಿಕ ಕೃಷಿ ಚಟುವಟಿಕೆಯ ಪ್ರೋತ್ಸಾಹಕ್ಕಾಗಿ ಸರ್ಕಾರದಿಂದ ಕೈಗೊಂಡ ಕ್ರಮಗಳಾವುವು ?

## ಕೊರೋನಾ ಹಿನ್ನೆಲೆಯಲ್ಲಿ ಉಡುಪಿ ಜಿಲ್ಲೆಯಲ್ಲಿ ನಿಲುಗಡೆಯಾದ ಕೆ.ಎಸ್.ಆರ್.ಟಿ.ಸಿ ಬಸ್ಸುಗಳ ಬಗ್ಗೆ

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೭೨೨ (೭೩೮) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೊರೋನಾ ಸಾಂಕ್ರಾಮಿಕ ಖಾಯಿಲೆಯ ಹಿನ್ನೆಲೆಯಲ್ಲಿ ಲಾಕ್‌ಡೌನ್ ಘೋಷಣೆಯ ಸಂದರ್ಭದಿಂದ ಉಡುಪಿ ಜಿಲ್ಲೆಯಲ್ಲಿ ನಿಲುಗಡೆಯಾದ ಕೆ.ಎಸ್.ಆರ್.ಟಿ.ಸಿ ಬಸ್ಸುಗಳ ಒಟ್ಟು ಸಂಖ್ಯೆ ಎಷ್ಟು ; ಅವುಗಳು ಯಾವುವು ; (ಮಾರ್ಗವಾರು ಮಾಹಿತಿಯನ್ನು ನೀಡುವುದು)

(ಆ) ಪ್ರಸ್ತುತ ಪುನರಾರಂಭಗೊಂಡಿರುವ ಬಸ್ಸುಗಳ ಸಂಖ್ಯೆ ಎಷ್ಟು ; ಅವು ಯಾವುವು ; ಹಾಗೂ ಪುನರಾರಂಭಗೊಳ್ಳಲು ಬಾಕಿ ಇರುವ ಬಸ್ಸುಗಳ ಸಂಖ್ಯೆ ಎಷ್ಟು ; (ಅವು ಯಾವುವು)

(ಇ) ಶಾಲಾ ಕಾಲೇಜುಗಳು ಪ್ರಾರಂಭಗೊಂಡಿರುವ ಹಿನ್ನೆಲೆಯಲ್ಲಿ, ಬಸ್ಸುಗಳ ಸಂಚಾರ ಪುನರಾರಂಭಗೊಳ್ಳದೇ ವಿದ್ಯಾರ್ಥಿಗಳು ತೊಂದರೆ ಅನುಭವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ ಪುನರಾರಂಭಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ?

## ಮಹಿಳಾ ಆಯೋಗದಲ್ಲಿ ನಡೆದಿರುವ ಅಕ್ರಮಗಳ ಬಗ್ಗೆ

**ಶ್ರೀ ಪ್ರಕಾಶ್ ಕೆ. ರಾಥೋಡ್ (ನಾಮನಿರ್ದೇಶನ ಹೊಂದಿದವರು) :–**

೬೨೩ (೭೪೨) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮಹಿಳಾ ಆಯೋಗದಲ್ಲಿ ಅಕ್ರಮಗಳು ನಡೆಯುತ್ತಿರುವ ಬಗ್ಗೆ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಅಕ್ರಮಗಳಲ್ಲಿ ಭಾಗಿಯಾಗಿರುವ ಅಧಿಕಾರಿಗಳು ಹಾಗೂ ನೌಕರರುಗಳ ವಿರುದ್ಧ ಸರ್ಕಾರ ತೆಗೆದುಕೊಂಡಿರುವ ಕ್ರಮಗಳ ಬಗ್ಗೆ ವಿವರ ಒದಗಿಸುವುದು ?

## ರಾಜ್ಯದಲ್ಲಿರುವ ಸಾರಿಗೆ ನಿಗಮಗಳ ಬಗ್ಗೆ

**ಶ್ರೀ ಪ್ರಕಾಶ್ ಕೆ. ರಾಥೋಡ್ (ನಾಮನಿರ್ದೇಶನ ಹೊಂದಿದವರು) :–**

೬೨೪ (೭೪೩) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಎಷ್ಟು ಸಾರಿಗೆ ನಿಗಮಗಳಿವೆ ; ಸದರಿ ನಿಗಮಗಳು ಯಾವ ಯಾವ ಜಿಲ್ಲೆಗಳಿವೆ ;

(ಆ) ಪ್ರತಿ ನಿಗಮಗಳಲ್ಲಿ ಇರುವ ಬಸ್ಸುಗಳ ಸಂಖ್ಯೆ ಎಷ್ಟು ? (ವಲಯವಾರು ವಿವರ ಒದಗಿಸುವುದು)

## ಖಾಸಗಿ ತರಬೇತಿ ಸಂಸ್ಥೆಗಳ ಬಗ್ಗೆ

**ಶ್ರೀ ಪ್ರಕಾಶ್ ಕೆ. ರಾಥೋಡ್ (ನಾಮನಿರ್ದೇಶನ ಹೊಂದಿದವರು) :–**

೬೨೫ (೭೪೪) ಮಾನ್ಯ ಕೈಮಗ್ಗ ಮತ್ತು ಜವಳಿ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೈಮಗ್ಗ ಮತ್ತು ಜವಳಿ ಇಲಾಖೆ ವತಿಯಿಂದ ೨೦೯ ಖಾಸಗಿ ತರಬೇತಿ ಸಂಸ್ಥೆಗಳು ಕಾರ್ಯನಿರ್ವಹಿಸುತ್ತಿದ್ದು, ಈ ಸಂಸ್ಥೆಗಳು ತರಬೇತಿ ಕೇಂದ್ರಗಳನ್ನು ನಡೆಸಲು ಇರುವ ಮಾನದಂಡಗಳೇನು ;

(ಆ) ಈ ಖಾಸಗಿ ತರಬೇತಿ ಸಂಸ್ಥೆಗಳಲ್ಲಿ ಹಾಲಿ ಕಾರ್ಯನಿರ್ವಹಿಸುತ್ತಿರುವವರ ಸಂಸ್ಥೆ ಎಷ್ಟು ? (ವಿವರ ಒದಗಿಸುವುದು)

## ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮದಿಂದ ಹಮ್ಮಿಕೊಂಡಿರುವ ಕಾರ್ಯಕ್ರಮಗಳ ಬಗ್ಗೆ

**ಶ್ರೀ ಪ್ರಕಾಶ್ ಕೆ. ರಾಥೋಡ್ (ನಾಮನಿರ್ದೇಶನ ಹೊಂದಿದವರು) :–**

೬೨೬ (೭೪೫) ಮಾನ್ಯ ಕೈಮಗ್ಗ ಮತ್ತು ಜವಳಿ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮದ ವತಿಯಿಂದ ವಿವಿಧ ಸಮುದಾಯಗಳಿಗೆ ಹಮ್ಮಿಕೊಂಡಿರುವ ಕಾರ್ಯಕ್ರಮಗಳೇನು ;

(ಆ) ಕಾರ್ಯಕ್ರಮಗಳು ಅನುಷ್ಠಾನಗೊಂಡಿರುವ ಬಗ್ಗೆ ತಾಲ್ಲೂಕುವಾರು ವಿವರ ಒದಗಿಸುವುದು ?

## ಗ್ರಾಮ ಪಂಚಾಯತ್ ಯೋಜನೆಗಳಿಗೆ ಅನುದಾನ ಬಿಡುಗಡೆ ಮಾಡುವ ಬಗ್ಗೆ

**ಶ್ರೀ ಪ್ರಕಾಶ್ ಕೆ. ರಾಥೋಡ್ (ನಾಮನಿರ್ದೇಶನ ಹೊಂದಿದವರು) :–**

೬೨೭ (೭೪೧) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಪ್ರಸ್ತುತ ಸಾಲಿಗೆ ಸೇರಿದಂತೆ ಕಳೆದ ೨ ವರ್ಷಗಳಲ್ಲಿ ಪ್ರತಿ ಗ್ರಾಮಪಂಚಾಯತಿಗಳಿಗೆ ಬಿಡಗಡೆ ಮಾಡಿರುವ ಅನುದಾನ ಎಷ್ಟು ;

(ಆ) ಯಾವ ಯಾವ ಯೋಜನೆಗಳಿಗೆ ಎಷ್ಟೆಷ್ಟು ಅನುದಾನ ನೀಡಲಾಗಿದೆ ; (ವಿವರ ಒದಗಿಸುವುದು)

(ಇ) ಗ್ರಾಮಪಂಚಾಯತ್‌ಗಳು ನಿರ್ವಹಿಸುತ್ತಿರುವ ಕಾರ್ಯಕ್ರಮಗಳಾವುವು ? (ವಿವರ ಒದಗಿಸುವುದು)

## ಸ್ಥಳೀಯ ಸಂಸ್ಥೆಗಳಲ್ಲಿ ಶುದ್ದ ಕುಡಿಯುವ ನೀರಿನ ಘಟಕ ಸ್ಥಾಪಿಸುವ ಬಗ್ಗೆ

**ಶ್ರೀ ಆರ್. ಪ್ರಸನ್ನ ಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೨೮ (೬೨೧) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಎಷ್ಟು ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ಕುಡಿಯುವ ನೀರಿನ ಶುದ್ದ ಘಟಕಗಳನ್ನು ಸ್ಥಾಪಿಸಲಾಗಿದೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಈಗಾಗಲೇ ಅಳವಡಿಸಿರುವ ಶುದ್ದ ಕುಡಿಯುವ ನೀರಿನ ಘಟಕಗಳು ಸುಸ್ಥಿತಿಯಲ್ಲಿವೆಯೇ ; ಸುಸ್ಥಿತಿಯಲ್ಲಿ ಇಲ್ಲದ ಶುದ್ದ ಕುಡಿಯುವ ನೀರಿನ ಘಟಕಗಳನ್ನು ಬದಲಾಯಿಸಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ ?

## ತೋಟಗಾರಿಕಾ ಇಲಾಖೆಯಿಂದ ನೀಡಿರುವ ಪ್ರೋತ್ಸಾಹಧನ ಕುರಿತು

**ಶ್ರೀ ಹೆಚ್.ಎಂ. ರಮೇಶಗೌಡ (ವಿಧಾನಸಭೆಯಿಂದ ಚುನಾಯಿತರಾದವರು):–**

೬೨೯ (೬೪೧) ಮಾನ್ಯ ತೋಟಗಾರಿಕೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ಮೂರು ವರ್ಷಗಳಿಂದ ತೋಟಗಾರಿಕೆ ಇಲಾಖೆಯಡಿ ಅಡಿಕೆ, ತೆಂಗು, ಬಾಳೆ, ಗೇರು ಮುಂತಾದ ತೋಟಗಾರಿಕೆ ಬೆಳೆಗಳಿಗೆ ಸರ್ಕಾರದಿಂದ ಮಂಜೂರಾದ ಪ್ರೋತ್ಸಾಹಧನ ಎಷ್ಟು ; (ಫಲಾನುಭವಿಗಳ ಪಟ್ಟಿ ನೀಡುವುದು)

(ಆ) ಪ್ರಸಕ್ತ ವರ್ಷ ಗೇರು ಬೆಳೆ ಇಳುವರಿಯಲ್ಲಿ ತೀವ್ರ ಕುಸಿತ ಕಂಡುಬಂದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಯಾವ ಕ್ರಮ ಕೈಗೊಳ್ಳಲಾಗಿದೆ ; (ವಿವರ ನೀಡುವುದು)

(ಇ) ಕಾಳು ಮೆಣಸಿನ ಧಾರಣೆಯಲ್ಲಿ ಕುಸಿತ ಕಂಡು ಬಂದಿದ್ದು ರೈತರ ಸಂಕಷ್ಟಕ್ಕೆ ಕಾರಣವಾಗಿರುವ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರ ಈ ಬಗ್ಗೆ ಯಾವ ಕ್ರಮ ಕೈಗೊಂಡಿದೆ ; (ಮಾಹಿತಿ ನೀಡುವುದು)

(ಈ) ದಾಳಿಂಬೆ, ಪಪ್ಪಾಯ, ದ್ರಾಕ್ಷಿ, ಮಾವು, ಹಲಸು ಮುಂತಾದ ಸಾಂಪ್ರದಾಯಿಕ ಹಣ್ಣುಗಳ ಬಲವರ್ಧನೆಗೆ ಸರ್ಕಾರ ಕೈಗೊಂಡ ಕ್ರಮಗಳೇನು ; (ವಿವರ ನೀಡುವುದು)

(ಉ) ರಬ್ಬರ್, ಅಡಿಕೆ ಹಾಗೂ ಇತರೆ ವಾಣಿಜ್ಯ ಬೆಳೆಗಳ ಪುನಶ್ಚೇತನ ಯೋಜನೆಗೆ ಸರ್ಕಾರ ಯಾವ ಕ್ರಮ ಕೈಗೊಂಡಿದೆ ? (ವಿವರ ನೀಡುವುದು)

## ‘ಮಿಷನ್ ಅಂತ್ಯೋದಯ’ ಮತ್ತು “ಜನರ ಯೋಜನೆ ಜನರ ಅಭಿವೃದ್ಧಿ” ಮತ್ತು ನಮ್ಮ ಗ್ರಾಮ ನಮ್ಮ ಯೋಜನೆ ಬಗ್ಗೆ

**ಶ್ರೀ ಹೆಚ್.ಎಂ. ರಮೇಶಗೌಡ (ವಿಧಾನಸಭೆಯಿಂದ ಚುನಾಯಿತರಾದವರು):–**

೬೩೦ (೬೪೨) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ‘ಮಿಷನ್ ಅಂತ್ಯೋದಯ’ ಮತ್ತು “ಜನರ ಯೋಜನೆ ಜನರ ಅಭಿವೃದ್ಧಿ” ಹಾಗೂ ೨೦೨೦–೨೦೨೧ರ “ನಮ್ಮ ಗ್ರಾಮ ನಮ್ಮ ಯೋಜನೆ” ಕಾರ್ಯಕ್ರಮಕ್ಕೆ ಮೀಸಲಿಟ್ಟ ಹಣವೆಷ್ಟು ; (ಮಾಹಿತಿ ನೀಡುವುದು)

(ಆ) ಈ ಸಂಬಂಧ ನೋಡೆಲ್ ಅಧಿಕಾರಿಗಳು ಮತ್ತು ಮೇಲ್ವಿಚಾರಣಾ ಅಧಿಕಾರಿಗಳ ತರಬೇತಿ ಪೂರ್ಣವಾಗಿದೆಯೇ ; ಪೂರ್ಣಗೊಂಡಿದ್ದಲ್ಲಿ, ಇದಕ್ಕೆ ವೆಚ್ಚವಾದ ಹಣವೆಷ್ಟು ; (ಸಂಪೂರ್ಣ ವಿವರ ನೀಡುವುದು)

(ಇ) ಪ್ರಸಕ್ತ ಸಾಲಿನಲ್ಲಿ ರಾಜ್ಯದ ವಿವಿಧ ಗ್ರಾಮಾಭಿವೃದ್ಧಿ ಯೋಜನೆಗಳಿಗೆ ಮೀಸಲಿಟ್ಟ ಹಾಗೂ ಖರ್ಚಾದ ಹಣವೆಷ್ಟು ; ಎಷ್ಟು ಪ್ರಗತಿ ಸಾಧಿಸಲಾಗಿದೆ ; (ಸಂಪೂರ್ಣ ಮಾಹಿತಿ ನೀಡುವುದು)

(ಈ) ಪ್ರಸಕ್ತ ಸಾಲಿನಲ್ಲಿ ಮಹಾತ್ಮ ಗಾಂಧಿ ಉದ್ಯೋಗ ಖಾತ್ರಿ ಯೋಜನೆಯಡಿ ರಾಜ್ಯದ ಎಷ್ಟು ಗ್ರಾಮಗಳು ನಿಗಧಿತ ಗುರಿ ಪೂರೈಸಿವೆ ; ಉದ್ಯೋಗ ಖಾತ್ರಿ ಯೋಜನೆಯಡಿ ಎಷ್ಟು ಮೊತ್ತದ ಕಾಮಗಾರಿಗಳು ಪೂರ್ಣಗೊಂಡಿವೆ ; (ಅಂಕಿ ಅಂಶ ಸಹಿತ ಮಾಹಿತಿ ನೀಡುವುದು)

(ಉ) ವಲಸೆ ಕೂಲಿ ಕಾರ್ಮಿಕರಿಗೆ ಉದ್ಯೋಗ ಖಾತ್ರಿ ಯೋಜನೆಯಡಿ ಕೆಲಸ ನೀಡಬೇಕೆನ್ನುವ ಆದೇಶದ ಅನ್ವಯ ಎಷ್ಟು ವಲಸಿಗ ಕೂಲಿ ಕಾರ್ಮಿಕರಿಗೆ ಕೆಲಸ ನೀಡಲಾಗಿದೆ ? (ಸಂಪೂರ್ಣ ಮಾಹಿತಿ ನೀಡುವುದು)

# ಮಕ್ಕಳ ಮೇಲೆ ನೂತನವಾದ ತಂತ್ರಜ್ಞಾನಗಳಿಂದ ಆಗುತ್ತಿರುವ ದುಷ್ಪರಿಣಾಮ ಕುರಿತು

**ಶ್ರೀ ಹೆಚ್.ಎಂ. ರಮೇಶಗೌಡ (ವಿಧಾನಸಭೆಯಿಂದ ಚುನಾಯಿತರಾದವರು):–**

೬೩೧ (೬೪೩) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮಕ್ಕಳ ಮೇಲೆ ನೂತನವಾದ ತಂತ್ರಜ್ಞಾನಗಳಿಂದ (ಕಂಪ್ಯೂಟರ್, ಲ್ಯಾಪ್ ಟಾಪ್, ಮೊಬೈಲ್, ಆನ್‌ಲೈನ್) ಆಗುತ್ತಿರುವ ದುಷ್ಪರಿಣಾಮಗಳ ಬಗ್ಗೆ ಸರ್ಕಾರ ಗಮನ ಹರಿಸಿದೆಯೇ ; ಇದಕ್ಕೆ ಪರಿಹಾರವನ್ನು ಹುಡುಕಿದೆಯೇ ; ಈ ಬಗ್ಗೆ ಸರ್ಕಾರದ ಗಮನಕ್ಕೆ ಬಂದ ಪ್ರಕರಣಗಳೆಷ್ಟು ;

(ಆ) ಮಕ್ಕಳಿಗೆ ಮಾನಸಿಕ ಮತ್ತು ದೈಹಿಕ ಒತ್ತಡಗಳನ್ನು ಪರಿಹರಿಸಲು/ ನಿಭಾಯಿಸಲು ಕೌನ್ಸೆಲಿಂಗ್ ಕೇಂದ್ರಗಳನ್ನು ತೆರೆಯಲಾಗಿದೆಯೇ ; ಹಾಗಿದ್ದಲ್ಲಿ, ಎಷ್ಟು ಕೇಂದ್ರಗಳನ್ನು ತೆರೆಯಲಾಗಿದೆ ; ಅವುಗಳ ಮಾಹಿತಿಯನ್ನು ನೀಡುವುದು ;

(ಇ) ವಿಕಲಚೇತನರ ಆರ್ಥಿಕ ಸಬಲೀಕರಣಕ್ಕೆ ಕೈಗೊಂಡ ಕಾರ್ಯಯೋಜನೆಗಳಾವುವು ; ವಿವರವಾದ ಮಾಹಿತಿ ನೀಡುವುದು ;

(ಈ) ಇದುವರೆವಿಗೂ ಎಷ್ಟು ಫಲಾನುಭವಿಗಳು ಈ ಯೋಜನೆಗಳಿಂದ ಅನುಕೂಲ ಪಡೆದಿದ್ದಾರೆ ?

## ಕೃಷಿ ಹೊಂಡ ನಿರ್ಮಾಣಕ್ಕಾಗಿ ಬಿಡುಗಡೆಯಾದ ಅನುದಾನ ಕುರಿತು

**ಶ್ರೀ ಹೆಚ್.ಎಂ. ರಮೇಶಗೌಡ (ವಿಧಾನಸಭೆಯಿಂದ ಚುನಾಯಿತರಾದವರು):–**

೬೩೨ (೬೪೪) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ಎರಡು ವರ್ಷಗಳಿಂದ ಕೃಷಿ ಇಲಾಖೆಯಿಂದ ಕೃಷಿ ಹೊಂಡ ನಿರ್ಮಾಣಕ್ಕಾಗಿ ಬಿಡುಗಡೆಯಾದ ಅನುದಾನವೆಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಕೃಷಿ ಹೊಂಡದ ಸಹಾಯಧನ ಸಮರ್ಪಕವಾಗಿ ರೈತರಿಗೆ ಸೇರುತ್ತಿದೆಯೇ; (ವಿವರ ನೀಡುವುದು)

(ಇ) ಕಳೆದ ಎರಡು ವರ್ಷಗಳಿಂದ ಎಷ್ಟು ಫಲಾನುಭವಿಗಳಿಗೆ ಸಹಾಯಧನ ವಿತರಣೆಯಾಗಿದೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಈ) ಕೃಷಿ ಇಲಾಖೆಯ ನೂತನ ಆ್ಯಪ್ ಎಷ್ಟು ಸಮರ್ಪಕವಾಗಿ ಕೆಲಸ ಮಾಡುತ್ತಿದೆ ; ಆ್ಯಪ್ ಬಳಕೆಯ ಕುರಿತಾಗಿ ರೈತರಿಗೆ ತರಬೇತಿಗಳಾಗಿವೆಯೇ ? (ವಿವರ ನೀಡುವುದು)

## ಹಜ್ ಭವನಗಳ ಕುರಿತು

**ಶ್ರೀ ಎನ್.ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು):–**

೬೩೩ (೬೧೫) ಮಾನ್ಯ ಮೂಲ ಸೌಲಭ್ಯ ಅಭಿವೃದ್ಧಿ ಹಾಗೂ ಹಜ್ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಇದುವರೆಗೆ ಸರ್ಕಾರದ ಅನುದಾನದಿಂದ ಎಷ್ಟು ಹಜ್ ಭವನಗಳನ್ನು ನಿರ್ಮಿಸಲಾಗಿದೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಈ ಹಜ್ ಭವನಗಳಿಂದ ರಾಜ್ಯ ಸರ್ಕಾರಕ್ಕೆ ಎಷ್ಟು ಆದಾಯ ಬರುತ್ತಿದೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಈ ಹಜ್ ಭವನಗಳನ್ನು ಯಾವ ರೀತಿಯಾಗಿ ಬಳಕೆ ಮಾಡಲಾಗುತ್ತಿದೆ ; ಈ ಭವನಗಳು ಒಂದು ಜಾತಿಯವರೆಗೆ ಮಾತ್ರವೇ, ಬೋರ್ಡಿಂಗ್ ಮತ್ತು ಲಾಡ್ಜಿಂಗ್ ವ್ಯವಸ್ಥೆ ನೀಡುವ ಹೋಟೆಲ್ ಆಗುತ್ತಿರುವ ಕುರಿತು ಸರ್ಕಾರದ ನಿಲುವೇನು ?

## ಕೃಷಿ ಹೊಂಡಗಳ ಕುರಿತು

**ಶ್ರೀ ಎನ್.ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು):–**

೬೩೪ (೬೧೬) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೃಷಿ ಭಾಗ್ಯ ಯೋಜನೆಯಡಿ ಕಳೆದ ಎರಡು ವರ್ಷಗಳಲ್ಲಿ ನಿರ್ಮಾಣಗೊಂಡಿರುವ ಕೃಷಿ ಹೊಂಡಗಳ ಸಂಖ್ಯೆ ಎಷ್ಟು ; (ವರ್ಷವಾರು ,ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಕೃಷಿ ಹೊಂಡಗಳನ್ನು ನಿರ್ಮಿಸಲು ಕಳೆದ ಎರಡು ವರ್ಷಗಳಲ್ಲಿ ಸರ್ಕಾರವು ಮಾಡಿರುವ ವೆಚ್ಚ ಎಷ್ಟು ; ಒಂದು ಕೃಷಿ ಹೊಂಡ ನಿರ್ಮಿಸಲು ಆಗುವ ವೆಚ್ಚ ಎಷ್ಟು ಅದಕ್ಕೆ ಸರ್ಕಾರದ ಸಹಾಯ ಧನವೆಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಸರ್ಕಾರದ ಸಹಾಯಾನುದಾನದಿಂದ ಕೃಷಿ ಹೊಂಡಗಳನ್ನು ನಿರ್ಮಿಸಿರುವ ಕೃಷಿಕರ ಹೆಸರು ಮತ್ತು ವಿಳಾಸ ಹಾಗೂ ಎಷ್ಟು ಕೃಷಿ ಹೊಂಡಗಳನ್ನು ನಿರ್ಮಿಸಿರುತ್ತಾರೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಈ) ಕೃಷಿ ಹೊಂಡ ನಿರ್ಮಿಸಲು ಯಾವ ಯಾವ ಸಂಸ್ಥೆಗಳಿಗೆ ದರ ಕರಾರಿನ್ವಯ ಅವಕಾಶ ಕಲ್ಪಿಸಲಾಗಿದೆ ? (ಜಿಲ್ಲಾವಾರು ಮಾಹಿತಿ ನೀಡುವುದು)

## ಕೈಮಗ್ಗ ಮತ್ತು ಜವಳಿ ಉದ್ಯಮದ ಅಭಿವೃದ್ಧಿ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭಾ ಕ್ಷೇತ್ರದಿಂದ ಚುನಾಯಿತರಾದವರು):–**

೬೩೫ (೬೧೪) ಮಾನ್ಯ ಕೈಮಗ್ಗ ಮತ್ತು ಜವಳಿ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ೫ ವರ್ಷಗಳಲ್ಲಿ ಕೈಮಗ್ಗ ಹಾಗೂ ಜವಳಿ ಉದ್ಯಮದ ಅಭಿವೃದ್ಧಿಗೆ ಸರ್ಕಾರ ಯಾವ ಕ್ರಮ ಕೈಗೊಂಡಿದೆ ;

(ಆ) ಕೈಮಗ್ಗದ ಬಟ್ಟೆಗಳ ಪ್ರಚಾರ ಹಾಗೂ ಬಳಕೆ ಹೆಚ್ಚಾಗಲು ಕೈಗೊಂಡ ಕ್ರಮಗಳು ಯಾವುವು ;

(ಇ) ಶಾಲಾ ಮಕ್ಕಳಿಗೆ ಸಮವಸ್ತ್ರ ನೀಡುವಲ್ಲಿ ಕೈಮಗ್ಗದ ಬಟ್ಟೆಗಳನ್ನು ಬಳಸಲಾಗುತ್ತದೆಯೇ ; ಇಲ್ಲವಾದಲ್ಲಿ, ಬಳಸದಿರಲು ಕಾರಣಗಳೇನು?

## ಬಸ್ ನಿಲ್ದಾಣಗಳಲ್ಲಿ ಪ್ರಯಾಣಿಕರಿಗೆ ಸೌಲಭ್ಯಗಳ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭಾ ಕ್ಷೇತ್ರದಿಂದ ಚುನಾಯಿತರಾದವರು):–**

೬೩೬ (೬೧೩) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಬಸ್ ನಿಲ್ದಾಣಗಳಲ್ಲಿ ಪ್ರಯಾಣಿಕರಿಗೆ ಯಾವ ಯಾವ ಮೂಲಭೂತ ಸೌಲಭ್ಯಗಳನ್ನು ಒದಗಿಸಲಾಗುತ್ತದೆ ;

(ಆ) ರಾಜ್ಯದ ಹಲವಾರು ಬಸ್ಸು ನಿಲ್ದಾಣಗಳಲ್ಲಿ ಶುದ್ಧ ಕುಡಿಯುವ ನೀರು, ಶುಭ್ರ ಶೌಚಾಲಯದ ವ್ಯವಸ್ಥೆ ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸದರಿ ವ್ಯವಸ್ಥೆಗಳನ್ನು ಒದಗಿಸಲು ಯಾವ ಕ್ರಮ ಕೈಗೊಳ್ಳಲಾಗಿದೆ ;

(ಇ) ಸಣ್ಣ ಮಕ್ಕಳನ್ನು ಹೊಂದಿರುವ ತಾಯಂದಿರಿಗೆ ಮಕ್ಕಳ ಹಸಿವನ್ನು ನೀಗಿಸುವ ಸಲುವಾಗಿ ಬಸ್ಸು ನಿಲ್ದಾಣದಲ್ಲಿ ಪ್ರತ್ಯೇಕ ವಿಶ್ರಾಂತಿ ಸ್ಥಳವನ್ನು ನಿಗದಿಪಡಿಸಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ?

## ರಾಜ್ಯದಲ್ಲಿರುವ ಗೆಳತಿ ವಿಶೇಷ ಚಿಕಿತ್ಸಾ ಘಟಕಗಳ ಕುರಿತು

**ಶ್ರೀ ಪಿ. ಆರ್. ರಮೇಶ್ (ನಾಮನಿರ್ದೇಶನ) :–**

೬೩೭ (೭೬೬) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಎಷ್ಟು ಗೆಳತಿ ವಿಶೇಷ ಚಿಕಿತ್ಸಾ ಘಟಕ ಹಾಗೂ ಸಾಂತ್ವನ ಕೇಂದ್ರಗಳನ್ನು ಸ್ಥಾಪಿಸಲಾಗಿದೆ ; (ವಿವರ ನೀಡುವುದು)

(ಆ) ಈ ಗೆಳತಿ ವಿಶೇಷ ಚಿಕಿತ್ಸಾ ಘಟಕ ಹಾಗೂ ಸಾಂತ್ವನ ಕೇಂದ್ರಗಳಲ್ಲಿ ದೌರ್ಜನ್ಯಕ್ಕೆ ಒಳಗಾದ ಎಷ್ಟು ಮಹಿಳೆಯರಿಗೆ ಸೌಲಭ್ಯ ಕಲ್ಪಿಸಿ ನೆರವು ನೀಡಲಾಗಿದೆ ; (ವಿವರ ನೀಡುವುದು)

(ಇ) ರಾಜ್ಯವ್ಯಾಪಿ ಗೆಳತಿ ವಿಶೇಷ ಚಿಕಿತ್ಸಾ ಘಟಕ ಹಾಗೂ ಸಾಂತ್ವನ ಕೇಂದ್ರಗಳನ್ನು ಸ್ಥಾಪಿಸಲು ಸರ್ಕಾರದ ಕ್ರಮವೇನು ? (ವಿವರ ನೀಡುವುದು)

## ರಾಜ್ಯದಲ್ಲಿರುವ ಮಹಿಳಾ ಸಾಂತ್ವನ ಕೇಂದ್ರಗಳ ಕುರಿತು

**ಶ್ರೀ ಪಿ. ಆರ್. ರಮೇಶ್ (ನಾಮನಿರ್ದೇಶನ) :–**

೬೩೮ (೭೬೭) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಎಷ್ಟು ಸಾಂತ್ವನ ಕೇಂದ್ರಗಳನ್ನು ಸ್ಥಾಪಿಸಲಾಗಿದೆ ; (ವಿವರ ನೀಡುವುದು)

(ಆ) ಈ ಗೆಳತಿ ವಿಶೇಷ ಚಿಕಿತ್ಸಾ ಘಟಕಗಳಲ್ಲಿ ದೌರ್ಜನ್ಯಕ್ಕೆ ಒಳಗಾದ ಎಷ್ಟು ಮಹಿಳೆಯರಿಗೆ ಸೌಲಭ್ಯ ಕಲ್ಪಿಸಿ ನೆರವು ನೀಡಲಾಗಿದೆ ; (ವಿವರ ನೀಡುವುದು)

(ಇ) ರಾಜ್ಯದಲ್ಲಿ ಸಾಂತ್ವನ ಕೇಂದ್ರಗಳನ್ನು ಸ್ಥಾಪಿಸಲು ಸರ್ಕಾರದ ಕ್ರಮವೇನು ? (ವಿವರ ನೀಡುವುದು)

## P.D.O. ಹುದ್ದೆಗಳ ಭರ್ತಿ ಬಗ್ಗೆ

**ಶ್ರೀ ಕೆ.ಟಿ. ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ) :–**

೬೫೯ (೭೭೩) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಮಂಜೂರಾದ P.D.O. ಹುದ್ದೆಗಳ ಸಂಖ್ಯೆ ಎಷ್ಟು ; ಇದರಲ್ಲಿ ಖಾಲಿ ಇರುವ ಹುದ್ದೆಗಳೆಷ್ಟು ; (ಜಿಲ್ಲಾವಾರು ವಿವರ ಒದಗಿಸುವುದು)

(ಆ) ಈ ಹುದ್ದೆಗಳನ್ನು ಯಾವಾಗ ಭರ್ತಿ ಮಾಡಲಾಗುವುದು ; (ವಿವರ ನೀಡುವುದು)

(ಇ) P.D.O. ಹುದ್ದೆಗಳನ್ನು ಮೇಲ್ದರ್ಜೆಗೇರಿಸುವ ಪ್ರಸ್ತಾವನೆ ಯಾವ ಹಂತದಲ್ಲಿದೆ? (ವಿವರ ನೀಡುವುದು)

## ಭಾರಿ ಮತ್ತು ಮಧ್ಯಮ ಗಾತ್ರದ ವಾಹನಗಳ Head light ಗಳ ಪ್ರಕರತೆಯನ್ನು ತಗ್ಗಿಸುವ ಬಗ್ಗೆ

**ಶ್ರೀ ಸುನೀಲ್ ಸುಬ್ರಮಣಿ ಎಂ.ಪಿ. (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ) :–**

೬೪೦ (೭೭೧) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಸಂಚಾರ ಮಾಡುವ ದೊಡ್ಡ ವಾಹನಗಳಿಗೆ ಅಳವಡಿಸುತ್ತಿರುವ ಹೆಡ್ ಲೈಟ್‌ಗಳಿಂದ ಆಗುತ್ತಿರುವ ಅಪಘಾತಗಳ ಬಗ್ಗೆ ಸರ್ಕಾರದ ಗಮನಕ್ಕೆ ಬಂದಿದೆಯೇ; ಇದ್ದಲ್ಲಿ, ಇದಕ್ಕೆ ತೆಗೆದುಕೊಂಡ ಕ್ರಮಗಳೇನು ;

(ಆ) ವಾಹನಗಳಲ್ಲಿ ಪ್ರಕರವಾದ ಎಲ್.ಇ.ಡಿ. ದೀಪಗಳನ್ನು ಅಳವಡಿಸಲು ಅವಕಾಶವಿದೆಯೇ ; ಇದ್ದಲ್ಲಿ, ಅದರ ಮಾಹಿತಿಯನ್ನು ನೀಡುವುದು; ಇಲ್ಲವಾದಲ್ಲಿ, ಇಂತಹ ವಾಹನಗಳ ವಿರುದ್ಧದ ಕ್ರಮಗಳ ವಿವರ ನೀಡುವುದು;

(ಇ) ಈ ಹಿಂದೆ ಭಾರಿ ವಾಹನಗಳಲ್ಲಿ ದೀಪಗಳ ಪ್ರಕರತೆಯನ್ನು ತಗ್ಗಿಸಲು ವಾಹನಗಳ ಹೆಡ್‌ಲೈಟ್‌ನ ಮೇಲ್ಭಾಗಕ್ಕೆ ಕಪ್ಪು ಬಣ್ಣವನ್ನು ಬಳಿಯುತ್ತಿದ್ದಂತೆ ಮಾಡಲು ಸರ್ಕಾರದ ಚಿಂತನೆಗಳೇನು ; (ವಿವರ ನೀಡುವುದು)

(ಈ) ಪ್ರಕರವಾದ ಮತ್ತು ಕಣ್ಣು ಚುಚ್ಚುವ ಎಲ್.ಇ.ಡಿ. ದೀಪಗಳನ್ನು ಅಳವಡಿಸಿಕೊಂಡಿರುವ ವಾಹನಗಳಿಂದ ಬೇರೆ ವಾಹನ ಸವಾರರಿಗೆ ತೊಂದರೆಯಾಗುತ್ತಿರುವುದು ಮತ್ತು ಅಪಘಾತಗಳು ಆಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಇದ್ದಲ್ಲಿ, ಇದನ್ನು ತಡೆಗಟ್ಟಲು ಸರ್ಕಾರದ ಕಠಿಣ ಕ್ರಮಗಳೇನು ? (ವಿವರ ನೀಡುವುದು)

## ಗ್ರಾಮ ಪಂಚಾಯತಿಗಳಲ್ಲಿ ಪೌತಿಖಾತೆಗಳನ್ನು ಆಂದೋಲನಗಳ ಮೂಲಕ ಮಾಡಿ ಕೊಡುವ ಬಗ್ಗೆ

**ಶ್ರೀ ಸುನೀಲ್ ಸುಬ್ರಮಣಿ ಎಂ.ಪಿ. (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ) :–**

೬೪೧ (೭೭೦) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಗ್ರಾಮ ಪಂಚಾಯತಿಯ ವ್ಯಾಪ್ತಿಯಲ್ಲಿನ ಜಾಗಗಳಿಗೆ/ ಮನೆಗಳಿಗೆ ಇಲಾಖೆ ವತಿಯಿಂದ ಪೌತಿಖಾತೆ ಆಂದೋಲನವನ್ನು ನಡೆಸಲಾಗಿದೆಯೇ ; ಇಲ್ಲವಾದಲ್ಲಿ, ಈ ಪೌತಿಖಾತೆ ಮಾಡಿಕೊಡುವ ಆಂದೋಲನವನ್ನು ನಡೆಸಲು ಸರ್ಕಾರದ ಚಿಂತನೆಗಳೇನು ;

(ಆ) ಈ ಪೌತಿಖಾತೆ ಆಂದೋಲನವನ್ನು ಪ್ರತಿ ಮೂರು ವರ್ಷಕ್ಕೊಮ್ಮೆ ಕಡ್ಡಾಯವಾಗಿ ನಡೆಸಲು ಸರ್ಕಾರದ ತೀರ್ಮಾನಗಳೇನು ; (ವಿವರ ನೀಡುವುದು)

(ಇ) ಈ ಪೌತಿಖಾತೆ ಆಂದೋಲನಗಳನ್ನು ಮಾಡಿದ್ದಲ್ಲಿ, ಗ್ರಾಮೀಣ ಭಾಗದ ಜನರಿಗೆ ಅನುಕೂಲವಾಗಿ ಗ್ರಾಮ ಪಂಚಾಯತಿಗಳ ಆದಾಯವು ವೃದ್ಧಿಸುವ ಜೊತೆಗೆ ದಾಖಲೆಗಳನ್ನು ಸರಿಪಡಿಸಲು ಸಹಕಾರಿಯಲ್ಲವೆ; ಇದರ ಬಗ್ಗೆ ಸರ್ಕಾರದ ಚಿಂತನೆಗಳೇನು ? (ವಿವರ ನೀಡುವುದು)

## ಮೂಲಭೂತ ಸೌಕರ್ಯಗಳ ಯೋಜನೆಗಳ ಅನುಷ್ಠಾನದ ಬಗ್ಗೆ

**ಶ್ರೀ ಕೆ.ಎ. ತಿಪ್ಪೇಸ್ವಾಮಿ (ನಾಮನಿರ್ದೇಶನ) :–**

೬೪೨ (೭೧೩) ಮಾನ್ಯ ಮೂಲ ಸೌಲಭ್ಯ ಅಭಿವೃದ್ಧಿ ಹಾಗೂ ಹಜ್ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಕೈಗೊಂಡಿರುವ ಮೂಲಭೂತ ಸೌಕರ್ಯಗಳ ಯೋಜನೆಗಳ ಅನುಷ್ಠಾನಗಳಲ್ಲಿ ಅಗತ್ಯವಿರುವ ಕಾರ್ಯಸಾಧ್ಯತೆ ಅಂತರ ನಿಧಿ (Viability Gap Fund) ಯನ್ನು ತೊಡಗಿಸಲು ಕೇಂದ್ರ ಸರ್ಕಾರ ರೂ. ೮ ಸಾವಿರ ಕೋಟಿಗಳ ನಿಧಿಯನ್ನು ಸ್ಥಾಪಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಈ ನಿಧಿಯಿಂದ ರಾಜ್ಯದಲ್ಲಿ ಮೂಲಭೂತ ಸೌಕರ್ಯ ಕಲ್ಪಿಸುವ ಉದ್ದೇಶದಿಂದ ಯಾವ ಯಾವ ಯೋಜನೆಗಳಿಗೆ ಅನುದಾನ ಪಡೆದಿದೆ ; (ವಿವರ ನೀಡುವುದು)

(ಇ) ಕೇಂದ್ರ ಸರ್ಕಾರ ಕೆಲವು ರಾಜ್ಯಗಳಲ್ಲಿ ಕೆಲವೊಂದು ಮೂಲಭೂತ ಸೌಕರ್ಯ ಕಲ್ಪಿಸುವ ಯೋಜನೆಗಳನ್ನು ಪ್ರಾಯೋಗಿಕ ಯೋಜನೆ (Pilot Project) ಗಳಾಗಿ ಕೈಗೆತ್ತಿಕೊಂಡಿರುವುದು ನಿಜವೇ ;

(ಈ) ಹಾಗಿದ್ದಲ್ಲಿ, ರಾಜ್ಯದಲ್ಲಿ ಕೈಗೊಂಡಿರುವ ಪ್ರಾಯೋಗಿಕ ಯೋಜನೆಗಳಾವುವು ; (ವಿವರ ನೀಡುವುದು)

(ಉ) ಕೇಂದ್ರ ಸರ್ಕಾರ ಈ ಕಾರ್ಯಸಾಧ್ಯತೆ ಅಂತರ ನಿಧಿ (Viability Gap Fund) ಯೋಜನೆಯನ್ನು ೨೦೨೫ನೇ ಇಸವಿಯವರೆಗೆ ವಿಸ್ತರಿಸಿರುವುದು ನಿಜವೇ ?

## ಪೌಷ್ಠಿಕತೆ ಸುರಕ್ಷಾ ಯೋಜನೆ ಅಡಿಯಲ್ಲಿ ಪೌಷ್ಠಿಕ ಆಹಾರ ಪೂರೈಕೆ

**ಶ್ರೀ ಕೆ.ಎ. ತಿಪ್ಪೇಸ್ವಾಮಿ (ನಾಮನಿರ್ದೇಶನ) :–**

೬೪೩ (೭೧೪) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕೇಂದ್ರ ಸರ್ಕಾರದ ಯೋಜನೆಯಂತೆ ೦–೧೪ ವಯೋಮಿತಿಯಲ್ಲಿರುವ ಮಕ್ಕಳಿಗೆ ಪೌಷ್ಠಿಕತೆ ಸುರಕ್ಷಾ ಯೋಜನೆ ಅಡಿಯಲ್ಲಿ ಪೌಷ್ಠಿಕ ಆಹಾರವನ್ನು ಒದಗಿಸುವ ಕಾರ್ಯಕ್ರಮ ಜಾರಿಯಲ್ಲಿದೆಯೇ ; (ವಿವರ ನೀಡುವುದು)

(ಆ) ಈ ಯೋಜನೆ ಅಡಿಯಲ್ಲಿ ಹೆಣ್ಣು ಮಗುವಿಗೆ ಪೌಷ್ಠಿಕ ಆಹಾರವನ್ನು ನೀಡಲು ವಿಶೇಷ ಕಾರ್ಯಕ್ರಮವನ್ನು ರೂಪಿಸಲಾಗಿದೆಯೇ ? (ವಿವರ ನೀಡುವುದು)

## ಅಲ್ಪ ಸಂಖ್ಯಾತ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿ ವೇತನ

**ಶ್ರೀ ಕೆ.ಎ. ತಿಪ್ಪೇಸ್ವಾಮಿ (ನಾಮನಿರ್ದೇಶನ) :–**

೬೪೪ (೭೧೫) ಮಾನ್ಯ ಕೈಮಗ್ಗ ಮತ್ತು ಜವಳಿ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೇಂದ್ರ ಸರ್ಕಾರದ ವಿವಿಧ ಯೋಜನೆಗಳ ಅಡಿಯಲ್ಲಿ ರಾಜ್ಯ ಸರ್ಕಾರ ಜಾರಿಗೊಳಿಸುತ್ತಿರುವ ಅಲ್ಪಸಂಖ್ಯಾತರ ಕಲ್ಯಾಣ ಯೋಜನೆಗಳು ಯಾವುವು ; (ಸಂಪೂರ್ಣ ವಿವರ ನೀಡುವುದು)

(ಆ) ಕಳೆದ ೦೩ ವರ್ಷಗಳಲ್ಲಿ ಎಷ್ಟು ಅಲ್ಪಸಂಖ್ಯಾತ ವಿದ್ಯಾರ್ಥಿಗಳಿಗೆ ವಿವಿಧ ಯೋಜನೆ ಅಡಿಯಲ್ಲಿ ವಿದ್ಯಾರ್ಥಿ ವೇತನ ನೀಡಲಾಗಿದೆ; (ಸಂಪೂರ್ಣ ವಿವರ ನೀಡುವುದು)

(ಇ) ಪ್ರಸ್ತುತ ಅಲ್ಪಸಂಖ್ಯಾತ ವಿದ್ಯಾರ್ಥಿಗಳಿಗೆ ನೀಡುವ ವಿದ್ಯಾರ್ಥಿ ವೇತನವನ್ನು ಜನಸಂಖ್ಯೆ ಆಧಾರದ ಮೇಲೆ ಹೆಚ್ಚಿಸಲು ಸರ್ಕಾರ ಯೋಚಿಸುತ್ತಿದೆಯೇ ? (ವಿವರ ನೀಡುವುದು)

## ಬೃಹತ್ ಜವಳಿ ಪಾರ್ಕ್‌ಗಳ ಸ್ಥಾಪನೆ ಬಗ್ಗೆ

**ಶ್ರೀ ಕೆ.ಎ. ತಿಪ್ಪೇಸ್ವಾಮಿ (ನಾಮನಿರ್ದೇಶನ) :–**

೬೪೫ (೭೧೬) ಮಾನ್ಯ ಕೈಮಗ್ಗ ಮತ್ತು ಜವಳಿ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೇಂದ್ರ ಸರ್ಕಾರ ಸ್ಥಾಪಿಸಲು ಉದ್ದೇಶಿಸಿರುವ ೭ ಬೃಹತ್ ಜವಳಿ ಪಾರ್ಕ್‌ಗಳಲ್ಲಿ ರಾಜ್ಯದ ಯಾವ ಪ್ರದೇಶಗಳಲ್ಲಿ ಈ ಬೃಹತ್ ಜವಳಿ ಪಾರ್ಕ್‌ಗಳನ್ನು ಸ್ಥಾಪಿಸಲು ಪ್ರಸ್ತಾವನೆ ಸಲ್ಲಿಸಲಾಗಿದೆ ; ಈ ಬೃಹತ್ ಜವಳಿ ಪಾರ್ಕ್‌ಗಳಲ್ಲಿ ತೊಡಗಿಸಿರುವ ಬಂಡವಾಳವೆಷ್ಟು;

(ಆ) ಈ ಬೃಹತ್ ಜವಳಿ ಪಾರ್ಕ್ ಸ್ಥಾಪನೆಯಿಂದ ಸ್ಥಳೀಯವಾಗಿ ರಾಜ್ಯದ ಜನರಿಗೆ ದೊರಕುವ ಉದ್ಯೋಗವೆಷ್ಟು ? (ಸಂಪೂರ್ಣ ವಿವರ ನೀಡುವುದು)

## ಅಲ್ಪ ಸಂಖ್ಯಾತ ಸಂಘ –ಸಂಸ್ಥೆಗಳಿಗೆ ಬಿಡುಗಡೆ ಮಾಡಿದ ಅನುದಾನ

**ಶ್ರೀ ಕೆ.ಎ. ತಿಪ್ಪೇಸ್ವಾಮಿ (ನಾಮನಿರ್ದೇಶನ) :–**

೬೪೬ (೭೧೨) ಮಾನ್ಯ ಕೈಮಗ್ಗ ಮತ್ತು ಜವಳಿ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿನ ಹಲವಾರು ಅಲ್ಪಸಂಖ್ಯಾತ ವರ್ಗಕ್ಕೆ ಸೇರಿದ ಸಮುದಾಯಗಳ ಸಂಘ–ಸಂಸ್ಥೆಗಳು ಸಕಾಲಿಕವಾಗಿ ಕೇಂದ್ರ ಸರ್ಕಾರದ ಮತ್ತು ರಾಜ್ಯ ಸರ್ಕಾರದ ವಿವಿಧ ಯೋಜನೆಗಳ ಅಡಿ ದೊರೆಯುವ ಸಹಾಯ ಧನದಿಂದ ವಂಚಿತರಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ ವಿವರ ನೀಡುವುದು;

(ಆ) ಕಳೆದ ೦೩ ವರ್ಷಗಳಲ್ಲಿ ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ವಿವಿಧ ಯೋಜನೆಗಳ ಅಡಿಯಲ್ಲಿ ಅಲ್ಪಸಂಖ್ಯಾತ ಸಂಘ-ಸಂಸ್ಥೆಗಳಿಗೆ ಒದಗಿಸಿದ ಮತ್ತು ಬಿಡುಗಡೆ ಮಾಡಿದ ಅನುದಾನವೆಷ್ಟು; (ಸಂಪೂರ್ಣ ವಿವರ ನೀಡುವುದು)

(ಇ) ವರ್ಷಾವಾರು ಅಲ್ಪಸಂಖ್ಯಾತ ಸಂಘ-ಸಂಸ್ಥೆಗಳಿಗೆ ನೀಡುವ ಅನುದಾನ ಕಡಿಮೆ ಆಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಅದರ ವಿವರ ನೀಡುವುದು;

(ಈ) ಹಿಂದಿನ ವರ್ಷಗಳ ಆಯ-ವ್ಯಯದಲ್ಲಿ ಬಳಕೆ ಆಗದೆ ಉಳಿದ ಅನುದಾನವನ್ನು ಮುಂದಿನ ವರ್ಷದ ಆಯ-ವ್ಯಯದಲ್ಲಿ ಸೇರ್ಪಡಿಸಿಕೊಳ್ಳಲು ಕ್ರಮ ವಹಿಸಲಾಗುವುದೇ ? (ವಿವರ ನೀಡುವುದು)

## ರಾಜ್ಯದ ಗ್ರಾಮ ಪಂಚಾಯಿತಿಗಳ ಬಗ್ಗೆ

**ಶ್ರೀ ಆರ್. ಬಿ. ತಿಮ್ಮಾಪೂರ (ವಿಧಾನಸಭೆಯಿಂದ ಚುನಾಯಿತರಾದವರು):-**

೬೪೭ (೭೯) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿರುವ ಗ್ರಾಮ ಪಂಚಾಯಿತಿಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು/ತಾಲ್ಲೂಕುವಾರು ವಿವರಗಳನ್ನು ಒದಗಿಸುವುದು)

(ಆ) ಕಳೆದ ಮೂರು ವರ್ಷಗಳಲ್ಲಿ ಗ್ರಾಮ ಪಂಚಾಯಿತಿಗಳಿಗೆ ರಾಜ್ಯ ಮತ್ತು ಕೇಂದ್ರ ಸರ್ಕಾರ ಒದಗಿಸಿರುವ ಅನುದಾನವೆಷ್ಟು ;

(ಇ) ಎಷ್ಟು ಅನುದಾನವನ್ನು ಗ್ರಾಮ ಪಂಚಾಯಿತಿಗಳು ಬಳಸಿಕೊಂಡು ಅಭಿವೃದ್ಧಿ ಕಾರ್ಯಗಳನ್ನು ಕೈಗೊಂಡಿದೆ ?

## ಕೊಡಗು ಜಿಲ್ಲೆಯ ಭತ್ತದ ಬೆಳೆಗಾರರಿಗೆ ವಿಶೇಷ ಪ್ಯಾಕೇಜ್ ಘೋಷಿಸುವ ಕುರಿತು

**ಶ್ರೀಮತಿ ಎಸ್. ವೀಣಾ ಅಚ್ಚಯ್ಯ (ವಿಧಾನಸಭೆಯಿಂದ ಚುನಾಯಿತರಾದವರು):–**

೬೪೮ (೭೬೩) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೊಡಗು ಜಿಲ್ಲೆಯಲ್ಲಿ ಸಂಭವಿಸಿದ ಪ್ರಾಕೃತಿಕ ವಿಕೋಪ ಹಾಗೂ ಅಕಾಲಿಕ ಮಳೆಯಿಂದಾಗಿ ಕಳೆದ ಮೂರ್‍ನಾಲ್ಕು ವರ್ಷಗಳಿಂದ ಸತತವಾಗಿ ಭತ್ತದ ಬೆಳೆ ಹಾಳಾಗಿರುವುದರಿಂದ, ರೈತರು ತೀವ್ರ ಸಂಕಷ್ಟಕ್ಕೆ ಸಿಲುಕಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಕಳೆದ ೩ ವರ್ಷಗಳಲ್ಲಿ ಕೊಡಗು ಜಿಲ್ಲೆಯಲ್ಲಿ ಆಗಿರುವ ಭತ್ತದ ಬೆಳೆ ನಷ್ಟದ ಅಂದಾಜಿನ ಸಂಪೂರ್ಣ ವಿವರಗಳೇನು ; ಹಾಗೂ ಸದರಿ ರೈತರಿಗೆ ನೀಡಿರುವ ಪರಿಹಾರಗಳೇನು ;

(ಇ) ಭತ್ತ ಬೆಳೆದು ಸಂಕಷ್ಟಕ್ಕೆ ಸಿಲುಕಿರುವ ರೈತರಿಗೆ ವಿಶೇಷ ಪ್ಯಾಕೇಜ್ ಘೋಷಿಸಲು ಸರ್ಕಾರ ಕ್ರಮ ಕೈಗೊಂಡಿದೆಯೇ ?

## ಕೊಡಗು ಜಿಲ್ಲೆಯಲ್ಲಿ ಮಳೆಹಾನಿ ಕಾಮಗಾರಿಗಳನ್ನು ನಿರ್ವಹಿಸಿರುವ ಗುತ್ತಿಗೆದಾರರಿಗೆ ಬಿಲ್ ಪಾವತಿ ಆಗದಿರುವ ಕುರಿತು

**ಶ್ರೀಮತಿ ಎಸ್. ವೀಣಾ ಅಚ್ಚಯ್ಯ (ವಿಧಾನಸಭೆಯಿಂದ ಚುನಾಯಿತರಾದವರು):–**

೬೪೯ (೭೬೪) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೊಡಗು ಜಿಲ್ಲೆಯಲ್ಲಿ ಕಳೆದ ಎರಡು ವರ್ಷಗಳಲ್ಲಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಇಲಾಖೆಯಿಂದ ಮಳೆಹಾನಿ

ಕಾಮಗಾರಿಗಳನ್ನು ನಿರ್ವಹಿಸಿ, ಪೂರ್ಣಗೊಳಿಸಿರುವ ಗುತ್ತಿಗೆದಾರರಿಗೆ ಸಂಪೂರ್ಣ ಹಣ ಪಾವತಿಯಾಗಿದೆಯೇ ;

(ಆ) ಪಾವತಿಯಾಗದಿದ್ದಲ್ಲಿ, ಗುತ್ತಿಗೆದಾರರಿಗೆ ಸಂದಾಯವಾಗಬೇಕಿರುವ ಬಾಕಿ ಹಣದ ಮೊತ್ತವೆಷ್ಟು ; ಮತ್ತು ಇದುವರೆಗೂ ಬಾಕಿ ಹಣ ಸಂದಾಯವಾಗದೆ ಇರಲು ಕಾರಣಗಳೇನು ;

(ಇ) ಯಾವ ಕಾಲಮಿತಿಯೊಳಗೆ ಗುತ್ತಿಗೆದಾರರಿಗೆ ಬಾಕಿ ಹಣ ಸಂದಾಯ ಮಾಡಲಾಗುವುದು ?

## ಸಂಕಷ್ಟದಲ್ಲಿರುವ ಕೊಡಗು ಜಿಲ್ಲೆಯಲ್ಲಿನ ಕಾಫಿ ಬೆಳೆಗಾರರಿಗೆ ವಿಶೇಷ ಪ್ಯಾಕೇಜ್ ಘೋಷಿಸುವ ಕುರಿತು

**ಶ್ರೀಮತಿ ಎಸ್. ವೀಣಾ ಅಚ್ಚಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) :–**

೬೫೦ (೭೬೫) ಮಾನ್ಯ ತೋಟಗಾರಿಕೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೊಡಗು ಜಿಲ್ಲೆಯಲ್ಲಿ ಸಂಭವಿಸಿದ ಪ್ರಾಕೃತಿಕ ವಿಕೋಪದಿಂದಾಗಿ ಕಳೆದ ಮೂರ್ನಾಲ್ಕು ವರ್ಷಗಳಿಂದ ಸತತವಾಗಿ ಕಾಫಿ ಬೆಳೆ ಹಾಳಾಗಿರುವುದರಿಂದ, ಕಾಫಿ ಬೆಳೆಗಾರರು ತೀವ್ರ ಸಂಕಷ್ಟಕ್ಕೆ ಸಿಲುಕಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಕಳೆದ ೦೩ ವರ್ಷಗಳಲ್ಲಿ ಕೊಡಗು ಜಿಲ್ಲೆಯಲ್ಲಿ ಎಷ್ಟು ವಿಸ್ತೀರ್ಣದ ಕಾಫಿ ತೋಟ ಹಾನಿಗೊಳಗಾಗಿದೆ ; ಹಾಗೂ ಕಾಫಿ ಬೆಳೆ ನಷ್ಟದ ಅಂದಾಜಿನ ವಿವರಗಳೇನು ;

(ಇ) ಸಂಕಷ್ಟದಲ್ಲಿರುವ ಕಾಫಿ ಬೆಳೆಗಾರರಿಗೆ ವಿಶೇಷ ಪ್ಯಾಕೇಜ್ ಘೋಷಿಸಲು ಸರ್ಕಾರ ಕ್ರಮ ಕೈಗೊಂಡಿದೆಯೇ ?

## ಕಲ್ಯಾಣ ಕರ್ನಾಟಕ ಭಾಗದಲ್ಲಿ ಅಪೌಷ್ಠಿಕತೆಯಿಂದ ಬಳಲುತ್ತಿರುವ ಜನರ ಬಗ್ಗೆ

**ಶ್ರೀ ವಿಜಯ್ ಸಿಂಗ್(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೫೧ (೭೧೭) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲ್ಯಾಣ ಕರ್ನಾಟಕ ಭಾಗದಲ್ಲಿ ಅತಿ ಹೆಚ್ಚು ಮಂದಿ ಅಪೌಷ್ಠಿಕತೆಯಿಂದ ಬಳಲುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಕಳೆದ ಮೂರು ವರ್ಷಗಳಿಂದ ಕಲ್ಯಾಣ ಕರ್ನಾಟಕ ಭಾಗದಲ್ಲಿ ಅಪೌಷ್ಠಿಕತೆಯನ್ನು ನಿವಾರಿಸಲು ಸರ್ಕಾರ ಬಿಡುಗಡೆ ಮಾಡಿದ ಅನುದಾನ ಎಷ್ಟು ? (ಜಿಲ್ಲಾವಾರು ಮಾಹಿತಿ ನೀಡುವುದು)

## ಬೀದರ್ ಜಿಲ್ಲೆಯಲ್ಲಿ ಸಾರಿಗೆ ಸೌಲಭ್ಯದಿಂದ ವಂಚಿತರಾಗಿರುವ ಬಗ್ಗೆ

**ಶ್ರೀ ವಿಜಯ್ ಸಿಂಗ್(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೫೨ (೭೧೮) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೀದರ್ ಜಿಲ್ಲೆಯ ತಾಲ್ಲೂಕು ಕೇಂದ್ರದಿಂದ ಹಳ್ಳಿಗಳಿಗೆ ಸಾರಿಗೆ ಸೌಲಭ್ಯವಿಲ್ಲದೆ ಜನಸಾಮಾನ್ಯರು ಹಾಗೂ ವಿದ್ಯಾರ್ಥಿಗಳಿಗೆ ತೊಂದರೆ ಆಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಸವ ಕಲ್ಯಾಣ ತಾಲ್ಲೂಕಿನ ಕೆಲವು ಗ್ರಾಮಗಳಲ್ಲಿ ಸಾರಿಗೆ ಸೌಲಭ್ಯದಿಂದ ಜನ ವಂಚಿತರಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸಾರಿಗೆ ಸೌಲಭ್ಯವನ್ನು ಒದಗಿಸಲು

ಸರ್ಕಾರ ಕೈಗೊಂಡ ಕ್ರಮಗಳೇನು ? (ತಾಲ್ಲೂಕುವಾರು ವಿವರ ನೀಡುವುದು)

## ಗ್ರಾಮ ಪಂಚಾಯತ್ ಸದಸ್ಯರಿಗೆ ಗೌರವಧನ ಹೆಚ್ಚಿಸುವ ಬಗ್ಗೆ

**ಶ್ರೀ ವಿಜಯ್ ಸಿಂಗ್(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೫೩ (೭೧೯) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಹೊಸದಾಗಿ ಆಯ್ಕೆಯಾಗಿರುವ ಗ್ರಾಮ ಪಂಚಾಯತ್ ಸದಸ್ಯರಿಗೆ ನೀಡುತ್ತಿರುವ ಗೌರವಧನ ಎಷ್ಟು ;

(ಆ) ಪಂಚಾಯತ್ ಸದಸ್ಯರುಗಳಿಗೆ ಗೌರವಧನವನ್ನು ಹೆಚ್ಚಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ; ಇದ್ದಲ್ಲಿ, ಎಂದಿನಿಂದ ಎಷ್ಟು ಗೌರವಧನವನ್ನು ಹೆಚ್ಚಿಸಲಾಗುವುದು ? (ವಿವರ ನೀಡುವುದು)

## ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ವಿಕಲಚೇತನರಿಗೆ ಮತ್ತು ಹಿರಿಯ ನಾಗರಿಕರಿಗೆ ನೀಡುವ ಯೋಜನೆಗಳ ಬಗ್ಗೆ

**ಶ್ರೀ ಬಿ.ಜಿ. ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೫೪ (೭೭೫) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ವಿಕಲಚೇತನರಿಗೆ ಮತ್ತು ಹಿರಿಯ ನಾಗರಿಕರಿಗೆ ಸರ್ಕಾರದಿಂದ ಯಾವ ಯಾವ ಯೋಜನೆಗಳನ್ನು ರೂಪಿಸಲಾಗಿದೆ ; (ವಿವರ ನೀಡುವುದು)

(ಆ) ಈ ಯೋಜನೆಗಳನ್ನು ಪಡೆಯುತ್ತಿರುವ ಫಲಾನುಭವಿಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಸದರಿ ಯೋಜನೆಗಳು ಫಲಾನುಭವಿಗಳಿಗೆ ವಿಶೇಷವಾಗಿ ವಿಕಲಚೇತನರಿಗೆ ಸಕಾಲದಲ್ಲಿ ತಲುಪುತ್ತಿಲ್ಲದಿರುವುದರ ಬಗ್ಗೆ ಸಾರ್ವಜನಿಕರಿಂದ ದೂರುಗಳು ಕೇಳಿ ಬರುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ ಸರ್ಕಾರ ಕೈಗೊಂಡ ಕ್ರಮಗಳೇನು ? (ವಿವರ ನೀಡುವುದು)

## ೨೦೧೯–೨೦೨೧ನೇ ಸಾಲಿನಲ್ಲಿ ಬೀದರ್ ಜಿಲ್ಲೆಗೆ ಕೃಷಿ ಹೊಂಡಗಳ ಕುರಿತು

**ಶ್ರೀ ರಘುನಾಥರಾವ್ ಮಲ್ಕಾಪುರೆ (ವಿಧಾನಸಭಾ ಕ್ಷೇತ್ರದಿಂದ ಚುನಾಯಿತರಾದವರು) :–**

೬೫೫ (೭೨೭) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೯ ರಿಂದ ೨೦೨೦–೨೦೨೧ನೇ ಸಾಲಿನಲ್ಲಿ ಬೀದರ್ ಜಿಲ್ಲೆಯಲ್ಲಿ ಕೃಷಿ ಇಲಾಖೆಯಿಂದ ಕೃಷಿ ಭಾಗ್ಯ ಯೋಜನೆಯಡಿಯಲ್ಲಿ ಎಷ್ಟು ಕೃಷಿ ಹೊಂಡಗಳನ್ನು ನಿರ್ಮಿಸಲಾಗಿದೆ ; (ತಾಲ್ಲೂಕುವಾರು ಸ್ಪಷ್ಟ ಮಾಹಿತಿ ನೀಡುವುದು)

(ಆ) ಇದಕ್ಕೆ ಮೀಸಲಿಟ್ಟಿರುವ ಅನುದಾನ ಎಷ್ಟು ; ಬಿಡುಗಡೆಯಾಗಿರುವ ಅನುದಾನ ಎಷ್ಟು; (ವರ್ಷವಾರು ವಿವರ ನೀಡುವುದು)

(ಇ) ಇದುವರೆಗೆ ಎಷ್ಟು ಫಲಾನುಭವಿಗಳು ಇದರ ಪ್ರಯೋಜನ ಪಡೆದಿರುತ್ತಾರೆ ; (ಫಲಾನುಭವಿಗಳ ಹೆಸರು ವಿಳಾಸದೊಂದಿಗೆ ವಿವರ ಒದಗಿಸುವುದು)

(ಈ) ಫಲಾನುಭವಿಗಳಿಗೆ ದೊರೆತಿರುವ ಸಬ್ಸಿಡಿ ಅನುದಾನವೆಷ್ಟು ? (ಸಂಪೂರ್ಣ ವಿವರ ನೀಡುವುದು)

## ಕೃಷಿ ಇಲಾಖೆಯಿಂದ ಮಂಜೂರಾದ ಯೋಜನೆಗಳ ಬಗ್ಗೆ

**ಶ್ರೀ ರಘುನಾಥರಾವ್ ಮಲ್ಕಾಪುರೆ (ವಿಧಾನಸಭಾ ಕ್ಷೇತ್ರದಿಂದ ಚುನಾಯಿತರಾದವರು) :–**

೬೫೬ (೭೨೮) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೩ ವರ್ಷಗಳಲ್ಲಿ ಕೃಷಿ ಇಲಾಖೆಯಿಂದ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ಜನಾಂಗದವರಿಗೆ ಮಂಜೂರಾದ ಯೋಜನೆಗಳಾವುವು ; (ಸಂಪೂರ್ಣ ಮಾಹಿತಿ ನೀಡುವುದು)

(ಆ) ಬೀದರ್ ಜಿಲ್ಲೆಯಲ್ಲಿ ಈ ಯೋಜನೆಗಳಿಗೆ ಆಯ್ಕೆಯಾದ ಫಲಾನುಭವಿಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಇ) ಈ ಯೋಜನೆಗಳಿಗೆ ನಿಗದಿಪಡಿಸಿರುವ ಗುರಿ ಮತ್ತು ಸಾಧನೆ ಎಷ್ಟು ;

(ಈ) ಈ ಯೋಜನೆಗಳಿಗೆ ನಿಗದಿಪಡಿಸಿದ ಅನುದಾನವೆಷ್ಟು ; (ತಾಲ್ಲೂಕುವಾರು ಫಲಾನುಭವಿಗಳ ಸಂಖ್ಯೆವಾರು ಮಾಹಿತಿ ನೀಡುವುದು)

(ಉ) ಬೀದರ್ ಜಿಲ್ಲೆಯಲ್ಲಿ ರೈತ ಸಂಪರ್ಕ ಕೇಂದ್ರಗಳಲ್ಲಿ ರೈತರಿಗೆ ನೀಡುತ್ತಿರುವ ತಾಡಪತ್ರಿಗಳು ಸರಿಯಾಗಿ ಇಲ್ಲದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮಗಳೇನು ? (ವಿವರ ನೀಡುವುದು)

## ಟ್ರ್ಯಾಕ್ಟರ್ ಖರೀದಿಗಾಗಿ ಸಹಾಯಧನ

**ಶ್ರೀ ರಘುನಾಥರಾವ್ ಮಲ್ಕಾಪುರೆ (ವಿಧಾನಸಭಾ ಕ್ಷೇತ್ರದಿಂದ ಚುನಾಯಿತರಾದವರು) :–**

೬೫೭ (೭೨೬) ಮಾನ್ಯ ತೋಟಗಾರಿಕೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೮ ರಿಂದ ೨೦೨೧ನೇ ಸಾಲಿನಲ್ಲಿ ಬೀದರ್ ಜಿಲ್ಲೆಯಲ್ಲಿ ರೈತರಿಗೆ ಟ್ರ್ಯಾಕ್ಟರ್ ಖರೀದಿಸಲು ನೀಡಿರುವ ಸಹಾಯಧನವೆಷ್ಟು ; (ವರ್ಷವಾರು, ತಾಲ್ಲೂಕುವಾರು ಹಾಗೂ ಫಲಾನುಭವಿಗಳ ಸಂಪೂರ್ಣ ವಿವರ ನೀಡುವುದು)

(ಆ) ೨೦೧೮ ರಿಂದ ೨೦೨೧ನೇ ಸಾಲಿನಲ್ಲಿ ತಾಲ್ಲೂಕಿನಾದ್ಯಂತ ಟ್ರ್ಯಾಕ್ಟರ್ ಸಹಾಯಧನಕ್ಕಾಗಿ ಬಂದಿರುವ ಅರ್ಜಿಗಳೆಷ್ಟು ಹಾಗೂ ಈ ಸಾಲಿನಲ್ಲಿ ಜಿಲ್ಲೆಯಲ್ಲಿ ಎಷ್ಟು ರೈತರಿಗೆ ಟ್ರ್ಯಾಕ್ಟರ್ ಖರೀದಿಗಾಗಿ ಸಹಾಯಧನ ನೀಡಲಾಗಿದೆ ? (ತಾಲ್ಲೂಕುವಾರು ವಿವರ ನೀಡುವುದು)

## ಹೊಸ ಗ್ರಾಮ ಪಂಚಾಯತಿಗಳ ಮಾಹಿತಿ ಕುರಿತು

**ಶ್ರೀ ಶಶಿಲ್ ಜಿ. ನಮೋಶಿ (ಶಿಕ್ಷಕರ ಕ್ಷೇತ್ರ) :–**

೬೫೮ (೭೫೦) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೦೩ ವರ್ಷಗಳಲ್ಲಿ ಕಲ್ಯಾಣ ಕರ್ನಾಟಕ ಭಾಗದಲ್ಲಿ ಎಷ್ಟು ಹೊಸ ಗ್ರಾಮ ಪಂಚಾಯತಿಗಳನ್ನು ಸೃಜಿಸಲಾಗಿದೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಹೊಸ ಗ್ರಾಮ ಪಂಚಾಯತಿಗಳನ್ನು ಮಾಡಲು ಇರುವ ಮಾನದಂಡಗಳೇನು ;

(ಇ) ರಾಜ್ಯದ ಪ್ರತೀ ಗ್ರಾಮ ಪಂಚಾಯತಿಗೂ ಸರ್ಕಾರದಿಂದ ಯಾವ ಯಾವ ಯೋಜನೆಗಳಿಗೆ ಎಷ್ಟು ಅನುದಾನ ನೀಡಲಾಗುತ್ತಿದೆ ; (ವಿವರ ನೀಡುವುದು)

(ಈ) ಗ್ರಾಮ ಪಂಚಾಯತಿಗಳ ಅಡಿಯಲ್ಲಿ ಬರುವ ಕಾಮಗಾರಿಗಳು ಯಾವುವು ಹಾಗೂ ಗ್ರಾಮ ಪಂಚಾಯತಿಗಳಿಗೆ ಸಂಬಂಧಪಟ್ಟ ಯೋಜನೆಗಳಾವುವು ? (ವಿವರವಾದ ಮಾಹಿತಿ ನೀಡುವುದು)

## ಅಂಗನವಾಡಿ ಮತ್ತು ಕಾರ್ಯಕರ್ತೆಯರ ಮಾಹಿತಿ ಕುರಿತು

**ಶ್ರೀ ಶಶಿಲ್ ಜಿ. ನಮೋಶಿ (ಶಿಕ್ಷಕರ ಕ್ಷೇತ್ರ) :–**

೬೫೯ (೭೪೯) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಎಷ್ಟು ಅಂಗನವಾಡಿ ಕೇಂದ್ರಗಳು ಕಾರ್ಯ ನಿರ್ವಹಿಸುತ್ತಿವೆ ; ಅಂಗನವಾಡಿ ಕಾರ್ಯಕರ್ತೆಯರಿಗೆ ನೀಡುತ್ತಿರುವ ಗೌರವಧನ ಎಷ್ಟು ; ಅವರ ದಿನದ ಕಾರ್ಯಾ ಅವಧಿ ಎಷ್ಟು ; (ವಿವರ ನೀಡುವುದು)

(ಆ) ಅಂಗನವಾಡಿ ಕಾರ್ಯಕರ್ತೆಯರ ಬೇಡಿಕೆಗಳು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮಗಳೇನು ;

(ಇ) ಅಂಗನವಾಡಿ ಕಾರ್ಯಕರ್ತೆಯರಿಗೆ ಸರಿಯಾದ ಸಮಯಕ್ಕೆ ಗೌರವಧನ ನೀಡಲಾಗುತ್ತಿದೆಯೇ ; ಹಾಗೂ ವೇತನ ವಿಳಂಭವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ?

## ನಾಗನಹಳ್ಳಿ ರೈಲ್ವೆ ಟರ್ಮಿನಲ್ ಕಾಮಗಾರಿ ಬಗ್ಗೆ

**ಶ್ರೀ ಎಸ್.ನಾಗರಾಜ್ (ಸಂದೇಶ್ ನಾಗರಾಜ್)(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೬೦ (೬೧೦) ಮಾನ್ಯ ಮೂಲ ಸೌಲಭ್ಯ ಅಭಿವೃದ್ಧಿ ಹಾಗೂ ಹಜ್ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ನಾಗನಹಳ್ಳಿ ರೈಲ್ವೆ ಟರ್ಮಿನಲ್ ಕಾಮಗಾರಿಯ ಉದ್ಘಾಟನೆ ಯಾವಾಗ ನಡೆಯಿತು ; ಈ ಯೋಜನೆಗೆ ಅಗತ್ಯವಾದ ಭೂಮಿ ಎಷ್ಟು; ಹಾಗೂ ಭೂಮಿಯ ಸ್ವಾಧೀನಕ್ಕೆ ಇದುವರೆಗೆ ರಾಜ್ಯ ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಆ) ಈ ಯೋಜನೆಗೆ ಕೇಂದ್ರದಿಂದ ಬಿಡುಗಡೆಯಾಗಿರುವ ಅನುದಾನ ಎಷ್ಟು ; ರಾಜ್ಯ ಸರ್ಕಾರ ಮ್ಯಾಚಿಂಗ್ ಗ್ರಾಂಟ್ ನೀಡಬೇಕಾಗಿದೆಯೇ; ಮ್ಯಾಚಿಂಗ್ ಗ್ರಾಂಟ್ ನೀಡಬೇಕಾಗಿದ್ದಲ್ಲಿ ಅದನ್ನು ನೀಡಲು ಹಾಗೂ ಭೂಸ್ವಾಧೀನ ಪಡಿಸಿಕೊಂಡು ಈ ಕಾಮಗಾರಿಯನ್ನು ಬೇಗ ಪ್ರಾರಂಭಿಸಿ ಮುಕ್ತಾಯವಾಗಲು ಜರುಗಿಸಲಿರುವ ಕ್ರಮಗಳೇನು ?

## ಮೈಸೂರು ಮಾನಸ ಗಂಗೋತ್ರಿಗೆ ಸಮರ್ಪಕ ರೀತಿಯಲ್ಲಿ ನಗರ ಸಾರಿಗೆ ಸೌಲಭ್ಯ ಒದಗಿಸುವ ಬಗ್ಗೆ

**ಶ್ರೀ ಎಸ್.ನಾಗರಾಜ್ (ಸಂದೇಶ್ ನಾಗರಾಜ್)(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೬೧ (೬೧೧) ಮಾನ್ಯ ಉಪ ಮುಖ್ಯಮಂತಿಗಳು ಹಾಗೂ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮೈಸೂರು ಮಾನಸ ಗಂಗೋತ್ರಿಗೆ ಮತ್ತು ಮುಕ್ತ ವಿಶ್ವವಿದ್ಯಾನಿಲಯಕ್ಕೆ ನಗರ ಬಸ್ ನಿಲ್ದಾಣದಿಂದ ಹಾಗೂ ನಗರದ ಇತರೆ ಕಡೆಗಳಿಂದ ಪ್ರತಿ ದಿನ ಮೈಸೂರು ನಗರ ಮತ್ತು ಹೊರ ಊರುಗಳಿಂದ

ಬರುವ ಸಾವಿರಾರು ವಿದ್ಯಾರ್ಥಿಗಳು ಒಡಾಡುತ್ತಿದ್ದು ಸೂಕ್ತ ನಗರ ಸಾರಿಗೆ ಸೌಲಭ್ಯ ಇಲ್ಲದೆ ತೊಂದರೆಗೆ ಒಳಗಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಮಾನಸಗಂಗೋತ್ರಿಗೆ ಹೋಗುತ್ತಿದ್ದ ೧೩೫/೧೩೪ ಮಾರ್ಗ ಸಂಖ್ಯೆಯ ಬಸ್‌ಗಳು ಕೂಡಾ ಸರಿಯಾಗಿ ಒಡಾಡದೇ ಗಂಗೋತ್ರಿಯ ಮತ್ತು ಮುಕ್ತ ವಿಶ್ವವಿದ್ಯಾನಿಲಯದ ವಿದ್ಯಾರ್ಥಿಗಳಿಗೆ ಮತ್ತು ಸಾರ್ವಜನಿಕರಿಗೆ ತೊಂದರೆ ಆಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ನಗರ ಬಸ್ ನಿಲ್ದಾಣದಿಂದ ಮಾನಸಗಂಗೋತ್ರಿಗೆ ಮತ್ತು ಗಂಗೋತ್ರಿಯಿಂದ ನಗರ ಬಸ್ ನಿಲ್ದಾಣಕ್ಕೆ ಸರಸ್ವತಿಪುರಂ ಮೂಲಕ ಮತ್ತು ರೈಲು ನಿಲ್ದಾಣ ಹಾಗೂ ವಿ.ವಿ.ಪುರಂ ಮೂಲಕ ಹೆಚ್ಚಿನ ಸಂಖ್ಯೆಯಲ್ಲಿ ಬಸ್‌ಗಳನ್ನು ಓಡಿಸಲು ಕ್ರಮ ತೆಗೆದುಕೊಳ್ಳಲಾಗುವುದೇ ?

**ಕೆ. ಆರ್. ಮಹಾಲಕ್ಷ್ಮಿ**
ಕಾರ್ಯದರ್ಶಿ
ಕರ್ನಾಟಕ ವಿಧಾನ ಪರಿಷತ್ತು

ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು–59/ಕಾ.ಸೂ. 0–153/500 ಪ್ರತಿಗಳು/01–03–2021